ಸಂಪುಟ : 10 ಸಂಚಿಕೆ: 188 ಪುಟ : 4+2 ಬೆಲೆ: 3.00 ಬುಧವಾರ ಸೆಪ್ಟೆಂಬರ್ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 188 Pages : 4+2 Price : 3.00 Wednesday September 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಬಿಹಾರದಲ್ಲಿ ನಿತೀಶ್ ಸರಕಾರದ ಮಹತ್ವದ ನಿರ್ಧಾರ

## ಚುನಾವಣೆಗೂ ಮುನ್ನ ಯುವಕರಿಗೆ ಬಂಪರ್ ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದಲ್ಲಿ ಮುಂಬರುವ 2025ರ ವಿಧಾನಸಭಾ ಚುನಾವಣೆಗೆ ಸಿದ್ಧತೆಗಳು ಬಿರುಸಾಗಿ ನಡೆಯುತ್ತಿವೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಸರ್ಕಾರವು ಸರ್ಕಾರಿ ನೌಕರಿ ನಿರೀಕ್ಷೆಯಲ್ಲಿದ್ದ ಯುವ ಜನತೆಗೆ ಭಾರಿ ಕೊಡುಗೆ ನೀಡಿದೆ. ಮಂಗಳವಾರ ನಡೆದ ಮಹತ್ವದ ಸಚಿವ ಸಂಪುಟ ಸಭೆಯಲ್ಲಿ, ವಿವಿಧ ಇಲಾಖೆಗಳಲ್ಲಿ 3,000ಕ್ಕೂ ಹೆಚ್ಚು ಹೊಸ ಹುದ್ದೆಗಳ ಸೃಷ್ಟಿಗೆ ಅನುಮೋದನೆ ನೀಡಲಾಗಿದೆ. ಈ ನಿರ್ಧಾರವನ್ನು ಚುನಾವಣೆಗೆ ಮುನ್ನ ಒಂದು ಪ್ರಮುಖ ಹೆಜ್ಜೆ ಎಂದು ವಿಶ್ಲೇಷಿಸಲಾಗಿದ್ದು, ಇದು ರಾಜ್ಯದ ರಾಜಕೀಯ ಸಮೀಕರಣಗಳ ಮೇಲೆ ಪ್ರಭಾವ ಬೀರಲಿದೆ ಎಂದು ನಿರೀಕ್ಷಿಸಲಾಗಿದೆ.

ಬಿಹಾರದಲ್ಲಿ ಯುವ ಮತದಾರರು ನಿರ್ಣಾಯಕ ಪಾತ್ರ ವಹಿಸುತ್ತಿದ್ದು, ಉದ್ಯೋಗ ಸೃಷ್ಟಿ ಯಾವಾಗಲೂ ಒಂದು ಪ್ರಮುಖ ಚುನಾವಣಾ ವಿಷಯವಾಗಿದೆ. ನಿತೀಶ್ ಸರ್ಕಾರವು ಈ ಅವಕಾಶವನ್ನು ಬಳಸಿಕೊಂಡು, ಯುವಕರನ್ನು ಸೆಳೆಯಲು ಮತ್ತು ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಪ್ರಯತ್ನಿಸುತ್ತಿದೆ. ಈ ಹೊಸ ಹುದ್ದೆಗಳ ಸೃಷ್ಟಿಯು ಕೇವಲ ಒಂದು ನಿರ್ಧಾರವಲ್ಲ, ಇದು ರಾಜ್ಯದ ಅಭಿವೃದ್ಧಿ ಮತ್ತು ಭವಿಷ್ಯದ ರಾಜಕೀಯ ತಂತ್ರದ ಒಂದು ಭಾಗವಾಗಿದೆ. ಶೀಘ್ರದಲ್ಲಿಯೇ ಈ ಹುದ್ದೆಗಳ ಕುರಿತು ಅಧಿಕೃತ ಅಧಿಸೂಚನೆ ಹೊರಬೀಳಲಿದ್ದು, ಉದ್ಯೋಗಾಕಾಂಕ್ಷಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ದೊರೆಯಲಿದೆ.

ಶಿರಹಟ್ಟಿಯಲ್ಲಿ ಒಳಮೀಸಲಾತಿ ವರ್ಗೀಕರಣದ ಅಧಿಸೂಚನೆ ವಿರೋಧಿಸಿ ಬೃಹತ್ ಪ್ರತಿಭಟನೆ

# ಅವೈಜ್ಞಾನಿಕ ವರ್ಗೀಕರಣದಿಂದ ಸಮುದಾಯಗಳಿಗೆ ಅನ್ಯಾಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಒಳಮೀಸಲಾತಿ ವರ್ಗೀಕರಣದ ಕುರಿತು ರಾಜ್ಯ ಸರಕಾರ ಸಚಿವ ಸಂಪುಟದಲ್ಲಿ ತೆಗೆದುಕೊಂಡಿರುವ ನಿರ್ಣಯಗಳ ಕರಡು ಅಧಿಸೂಚನೆಯನ್ನು ವಿರೋಧಿಸಿ ಹಾಗೂ ನಾಗಮೋಹನದಾಸ ವರದಿಯನ್ನು ಅಂಗೀಕರಿಸದಿರುವಂತೆ ಲಂಬಾಣಿ, ಕೊರಮ, ಕೊರಚ, ಭೋವಿ ಅಲೆಮಾರಿ, ಅರೆಅಲೆಮಾರಿ ಸಮುದಾಯಗಳಿಂದ ತಹಸೀಲ್ದಾರ ಮೂಲಕ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಮನವಿ ಸಲ್ಲಿಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸರಕಾರ ಇತ್ತೀಚೆಗೆ ಸಚಿವ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಯ 101 ಜಾತಿಗಳನ್ನು ಮೂರು ವರ್ಗಗಳಾಗಿ ವಿಂಗಡಿಸುವ ಮೂಲಕ ಒಳ ಮೀಸಲಾತಿ ನೀಡಲು ತೀರ್ಮಾನಿಸಿರುವುದು ಖಂಡನೀಯ. ಒಳ ಮೀಸಲಾತಿ ವರ್ಗೀಕರಣವನ್ನು ನೈಜತೆಯ ಆಧಾರದ ಮೇಲೆ ಮಾಡಿಲ್ಲ. ಇದು ಅವೈಜ್ಞಾನಿಕ ಮತ್ತು ಕಾನೂನು ಬಾಹಿರ ತೀರ್ಮಾನವಾಗಿದೆ.

ಇದರಿಂದ ಬಂಜಾರ, ಕೊರಮ, ಕೊರಚ, ಭೋವಿ ಸಮುದಾಯಗಳಿಗೆ ಘೋರ ಅನ್ಯಾಯವಾಗಲಿದೆ. ಕೊಲಂಬೋ ಸಮುದಾಯಗಳ ಜನಸಂಖ್ಯೆಯು ಹೆಚ್ಚಾಗಿದ್ದು, ಈ ಸಮುದಾಯವು ಸಾಮಾಜಿಕ, ಶೈಕ್ಷಣಿಕ, ರಾಜಕೀಯ, ಆರ್ಥಿಕ ಮತ್ತು ಉದ್ಯೋಗಿಕ ಸೌಲಭ್ಯಗಳಿಂದ ಈಗಾಗಲೇ ವಂಚಿತವಾಗಿದೆ.

ಸರಿಯಾದ ಮಾರ್ಗ ಅನುಸರಿಸದೆ, ವೈಜ್ಞಾನಿಕವಾಗಿ ಸಮೀಕ್ಷೆ ಮಾಡದೆ ದತ್ತಾಂಶಗಳನ್ನು ಕ್ರೋಢೀಕರಿಸಿ ಸಿದ್ದಪಡಿಸಿರುವ ಈ ವರದಿಯನ್ನು ಅಂಗೀಕರಸಬಾರದು. ಮತ್ತೊಮ್ಮೆ ನೈಜತೆಯಿಂದ ದತ್ತಾಂಶಗಳನ್ನು ಸಮೀಕ್ಷೆಯ ಮೂಲಕ ಕ್ರೋಢೀಕರಿಸುವಂತೆ ಆಯೋಗಕ್ಕೆ ಸೂಚಿಸಬೇಕು. ಇಲ್ಲವಾದಲ್ಲಿ ಕೇಂದ್ರ ಸರಕಾರವು ಮುಂದಿನ ದಿನಗಳಲ್ಲಿ ಮಾಡುವ ಜನಸಂಖ್ಯೆ ಹಾಗೂ ಜಾತಿಗಣತಿಯನ್ನು ಪರಿಗಣಿಸಬೇಕು. ರಾಜ್ಯ ಸರಕಾರ ಸಚಿವ ಸಂಪುಟದಲ್ಲಿ ತೆಗೆದುಕೊಂಡಿರುವ ತೀರ್ಮಾನವನ್ನು ಕೈಬಿಡಬೇಕು. ಸಚಿವ ಸಂಪುಟದ ಒಳಮೀಸಲಾತಿಯ ವರ್ಗೀಕರಣದ ಕರಡು ಅಧಿಸೂಚನೆಯನ್ನು ಹಿಂತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯ ನಿಮಿತ್ತ ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಡಿಎಸ್‌ಪಿ ಮುರ್ತುಜಾ ಖಾದ್ರಿ, ನರಗುಂದ ಡಿಎಸ್‌ಪಿ ಪ್ರಭುಗೌಡ ಕಿರದಳ್ಳಿ, ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ, ಶಿರಹಟ್ಟಿ ಪಿಎಸ್‌ಐ ಚನ್ನಯ್ಯ ದೇವೂರ, 2 ಕೆಎಸ್‌ಆರ್‌ಪಿ ತುಕಡಿ, ಹೋಮ್‌ಗಾರ್ಡ್ಸ್ ಸೇರಿದಂತೆ ನೂರಾರು ಪೊಲೀಸ್ ಸಿಬ್ಬಂದಿಗಳು ಬಿಗಿ ಬಂದೋಬಸ್ತ್ ವ್ಯವಸ್ಥೆಯನ್ನು ಕಲ್ಪಿಸಿದ್ದರು.

ಇದಕ್ಕೂ ಮುನ್ನ ಶ್ರೀ ಜ.ಫಕೀರೇಶ್ವರ ಮಠದಿಂದ ಆರಂಭವಾರ ಬೃಹತ್ ಪ್ರತಿಭಟನಾ ಮೆರವಣಿಗೆಯು ಪ್ರಮುಖ ವೃತ್ತಗಳಲ್ಲಿ ಸಂಚರಿಸಿ, ರಾಜ್ಯ ಸರಕಾರದ ವಿರುದ್ಧ ಘೋಷಣೆ ಕೂಗುತ್ತಾ, ನೆಹರು ವೃತ್ತದಲ್ಲಿ ಮಳೆಯ ಮಧ್ಯದಲ್ಲೇ ಅರೆಬೆತ್ತಲೆ ಮತ್ತು ಉರುಳು ಸೇವೆಯನ್ನು ಮಾಡುವುದರ ಮೂಲಕ ಪ್ರತಿಭಟಿಸಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಶಿವು ಲಮಾಣಿ, ಜಾನು ಲಮಾಣಿ, ದೇವಪ್ಪ ಲಮಾಣಿ, ದೀಪಕ ಲಮಾಣಿ, ಸಂತೋಷ ಲಮಾಣಿ, ಲಕ್ಷ್ಮಣ ಲಮಾಣಿ, ಥಾವರೆಪ್ಪ ಲಮಾಣಿ, ಗುರಪ್ಪ ಲಮಾಣಿ, ಪರಮೇಶ ಲಮಾಣಿ, ಪುಂಡಲೀಕ ಲಮಾಣಿ ಮುಂತಾದವರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ತಾಲೂಕು ಮಟ್ಟದ ಪ.ಪೂ ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಶಾಸಕ ಡಾ.ಚಂದ್ರು ಲಮಾಣಿ

# ಸಾಧನೆಯ ಛಲವಿದ್ದರೆ ಗುರಿ ಸುಗಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ರೀಡೆ ಪರಸ್ಪರ ಸ್ನೇಹ, ಬಾಂಧವ್ಯ ವೃದ್ಧಿಸುವ ಹೊಂದಾಣಿಕೆ ಮತ್ತು ನಾಯಕತ್ವದ ಗುಣ ಬೆಳೆಯುವಲ್ಲಿ ನೆರವಾಗುತ್ತದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಅಗಡಿ ಪ.ಪೂ. ಕಾಲೇಜುಗಳ ಸಹಯೋಗದಲ್ಲಿ ಲಕ್ಷ್ಮೇಶ್ವರ ತಾಲೂಕು ಮಟ್ಟದ ಪ.ಪೂ ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.




ವಿದ್ಯಾರ್ಥಿಗಳ ದೈಹಿಕ, ಮಾನಸಿಕ, ಬೌದ್ಧಿಕ ಬೆಳವಣಿಗೆಗೆ ಕ್ರೀಡೆಗಳು ಪೂರಕ. ವಿದ್ಯಾರ್ಥಿಗಳು ಕ್ರೀಡೆಯ ಜೊತೆಗೆ ಪಾಠಕ್ಕೂ ಅಷ್ಟೇ ಆದ್ಯತೆ ನೀಡಬೇಕು. ಸಾಧನೆ ಮಾಡುವ ಛಲ ನಿಮ್ಮಲ್ಲಿದ್ದರೆ ಗುರಿ ತಲುಪುವುದು ಸುಲಭವಾಗಲಿದೆ. ದೈಹಿಕ, ಮಾನಸಿಕ ಸದೃಢತೆಗೆ ಕ್ರೀಡೆ ಅವಶ್ಯವಾಗಿದ್ದು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ದುಶ್ಚಟಗಳಿಗೆ ದಾಸರಾಗಿ, ಆರೋಗ್ಯಕರವಲ್ಲದ ಆಹಾರಗಳನ್ನು ಸೇವಿಸುತ್ತಾ ತಮ್ಮಲ್ಲಿರುವ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಿದ್ದಾರೆ. ಮನುಷ್ಯನಿಗೆ ಮುಖ್ಯವಾಗಿ ಆರೋಗ್ಯ ಉತ್ತಮವಾಗಿದ್ದಲ್ಲಿ ಎಲ್ಲವನ್ನು ಗೆಲ್ಲುವ ಭಾವನೆ ಬರುತ್ತದೆ ಎಂದರು.

ಎಷ್ಟು ದುಡ್ಡಿದ್ದರೂ ಆರೋಗ್ಯ ಸಂಪತ್ತಿನ ಮುಂದೆ ಇವೆಲ್ಲವೂ ಶೂನ್ಯ. ಸಾಕಷ್ಟು ದುಡ್ಡು ಮಾಡಿರುವ ವ್ಯಕ್ತಿಯನ್ನು ಕೇಳಿದಾಗ ಆತನಿಗೆ ದುಡ್ಡಿನಿಂದ ಆರೋಗ್ಯ ಕೊಳ್ಳಲಾಗುವದಿಲ್ಲ ಎನ್ನುವ ಭಾವನೆ ಬಂದಿರುತ್ತದೆ. ನಿತ್ಯ ಕ್ರೀಡೆಯಲ್ಲಿ ಪಾಲ್ಗೊಳ್ಳುವದರ ಜೊತೆಗೆ, ಯೋಗ ಇತ್ಯಾದಿಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡಲ್ಲಿ ಮಾನಸಿಕವಾಗಿ ಸದೃಢವಾಗಿ ಬೆಳೆದುನಿಲ್ಲಬಹುದು. ಈ ನಿಟ್ಟಿನಲ್ಲಿ ಕ್ರೀಡೆಯ ಬಗ್ಗೆ ಮಕ್ಕಳಲ್ಲಿ ಆಸಕ್ತಿ ಹೆಚ್ಚಬೇಕು. ಅಗಡಿ ಸಂಸ್ಥೆ ನಮ್ಮ ಊರಿಗೆ ಒಂದು ಕಳಶಪ್ರಾಯ ಶಿಕ್ಷಣ ಕೇಂದ್ರವಾಗಿರುವದು ನಮ್ಮೆಲ್ಲರ ಹೆಮ್ಮೆಯಾಗಿದೆ ಎಂದರು.

ತಾಲೂಕಾ ಪ.ಪೂ ಉಪನ್ಯಾಸಕರ ಸಂಘದ ಅಧ್ಯಕ್ಷ ಹಾಗೂ ಸರಕಾರಿ ಪ.ಪೂ ಕಾಲೇಜಿನ ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ಮಾತನಾಡಿ, ಎಲ್ಲ ಪ.ಪೂ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಿಸುವದಕ್ಕೆ ಸರಕಾರ ಮುಂದಾಗಬೇಕು. ಮಕ್ಕಳಿಗೆ ಸರಿಯಾದ ತರಬೇತಿ ದೊರೆತರೆ ರಾಜ್ಯಮಟ್ಟದವರೆಗೂ ಸಾಧನೆ ಮಾಡಬಹುದಾಗಿದೆ. ತಾಲೂಕಾ ಕ್ರೀಡಾಂಗಣ ಕಾಮಗಾರಿಯನ್ನು ಆದಷ್ಟು ಶೀಘ್ರ ಮಾಡಿದರೆ ಕ್ರೀಡಾಪಟುಗಳಿಗೆ ಪ್ರೋತ್ಸಾಹ ದೊರಕಿದಂತಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ವಹಿಸಿದ್ದರು. ಗೋನಾಳ ಗ್ರಾ.ಪಂ ಅಧ್ಯಕ್ಷ ರಾಮನಗೌಡ ಹೊಸಗೌಡ್ರ, ಉಪಾಧ್ಯಕ್ಷೆ ಗಂಗಮ್ಮ ತಳವಾರ, ದೈಹಿಕ ಶಿಕ್ಷಣ ನಿರ್ದೇಶಕ ಎಸ್.ಎಫ್. ಕೊಡ್ಲಿ, ಎಂ.ಎಂ. ಹವಳದ, ಪ್ರೊ. ವಿಕ್ರಮ ಶಿರೋಳ, ಗದಗ ಜಿಲ್ಲಾ ನೋಡಲ್ ಅಧಿಕಾರಿ ಎಂ.ಎಸ್. ಶಾಮದಾರ್, ನಿವೃತ್ತ ದೈಹಿಕ ಶಿಕ್ಷಣ ಉಪನ್ಯಾಸಕ ಸುರೇಶ ಕೊಡ್ಲಿ ಹಾಗೂ ತಾಲೂಕಿನ ಪ.ಪೂ ಕಾಲೇಜುಗಳ ಪ್ರಾಚಾರ್ಯರು, ದೈಹಿಕ ಶಿಕ್ಷಣ ನಿರ್ದೇಶಕರು, ನಿರ್ಣಾಯಕರು ಇದ್ದರು.

ಪ್ರಾಚಾರ್ಯ ಪ್ರಕಾಶ ಹೊಂಗಲ್ ಸ್ವಾಗತಿಸಿದರು. ಸಿ.ಎಸ್. ಹಿರೇಮಠ ನಿರೂಪಿಸಿದರು. ಎನ್.ಎಸ್. ಬೋದ್ಲೇಖಾನ್ ವಂದಿಸಿದರು.

## ಶ್ರೀ ವೀರಭದ್ರೇಶ್ವರ ಅಗ್ನಿಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಹಡಗಲಿ ಗ್ರಾಮದಲ್ಲಿ ಸೆ.3ರಂದು ಮಧ್ಯಾಹ್ನ 12.30ಕ್ಕೆ ಶ್ರೀ ವೀರಭದ್ರೇಶ್ವರ ಅಗ್ನಿಮಹೋತ್ಸವ ನಡೆಯಲಿದೆ.

ಮಧ್ಯಾಹ್ನ 1.30ಕ್ಕೆ ಪ್ರಸಾದ ವಿತರಣೆ, ಸಂಜೆ 5 ಗಂಟೆಗೆ ರಥೋತ್ಸವ, ಸೆ. 4ರ ಸಂಜೆ 5 ಗಂಟೆಗೆ ಕಡುಬಿನ ಕಾಳಗ, ರಾತ್ರಿ 10 ಗಂಟೆಗೆ ಶ್ರೀ ವೀರಭದ್ರೇಶ್ವರ ನಾಟ್ಯ ಸಂಘ ಹಡಗಲಿ ಇವರಿಂದ 'ಮಾಂಗಲ್ಯ ತಂದ ಮೈದುನ' ಎಂಬ ಸಾಮಾಜಿಕ ನಾಟಕ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಗಣಪತಿ ವಿಸರ್ಜನಾ ಮೆರವಣಿಗೆಯಲ್ಲಿ ಶ್ರೀರಾಮುಲು ಭರ್ಜರಿ ಡ್ಯಾನ್ಸ್!

■ವಿಜಯಸಾಕ್ಷಿ ಸುದ್ದಿ, ಬಳ್ಳಾರಿ

ಗಣಪತಿ ವಿಸರ್ಜನಾ ಮೆರವಣಿಗೆಯಲ್ಲಿ ಬಿಜೆಪಿ ಮುಖಂಡ ಬಿ. ಶ್ರೀರಾಮುಲು ಭರ್ಜರಿ ಡ್ಯಾನ್ಸ್ ಮಾಡಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಈ ವಿಡಿಯೋ ಭಾರೀ ವೈರಲ್ ಆಗಿದೆ.

ಹಿಂದೂ ಮಹಾಸಭೆಯ ಗಣಪತಿ ವಿಸರ್ಜನೆ ಮೆರವಣಿಗೆ ವೇಳೆ ಯುವಕರ ಜೊತೆ ಮಾಜಿ ಸಚಿವ ಶ್ರೀರಾಮುಲು ಭರ್ಜರಿ ಸ್ಟೆಪ್ಸ್ ಹಾಕಿದ್ದಾರೆ. ಬಳ್ಳಾರಿಯ ಸೆಂಟ್ರನರಿ ಹಾಲ್ ನಲ್ಲಿ ಪ್ರತಿಷ್ಠಾಪನೆ ಮಾಡಿದ ಹಿಂದೂ ಮಹಾಸಭೆಯ ಗಣಪತಿಯನ್ನು ಕಳೆದ ಏಳು ದಿನಗಳಿಂದ ಶ್ರದ್ಧಾ ಭಕ್ತಿಯಿಂದ ಪೂಜೆ ಪುನಸ್ಕಾರ ಮಾಡಲಾಯಿತು.

ಮಂಗಳವಾರ ಸಂಜೆ ಬಳ್ಳಾರಿ ನಗರದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮೂಲಕ ವಿಸರ್ಜನೆಗೆ ಕರೆದುಕೊಂಡು ಹೋಗುವ ವೇಳೆ ಶ್ರೀರಾಮುಲು, ಮಾಜಿ ಶಾಸಕ ಸೋಮಶೇಖರ್ ರೆಡ್ಡಿ, ಶಾಸಕ ಭರತ್ ರೆಡ್ಡಿ ಭಾಗವಹಿಸಿದ್ದರು. ಈ ವೇಳೆ ಅಭಿಮಾನಿಗಳ ಒತ್ತಾಸೆಗೆ ಶ್ರೀರಾಮುಲು ಡಿಜೆ ಸದ್ದಿಗೆ ಭರ್ಜರಿ ಹೆಜ್ಜೆ ಹಾಕಿದ್ದಾರೆ. ಅಲ್ಲದೇ ಇದೇ ವೇಳೆ ಯುವಕರು, ಮಹಿಳೆಯರು ಕೂಡ ಭರ್ಜರಿ ಸ್ಟೆಪ್ಸ್ ಹಾಕಿದ್ದಾರೆ.

## ಶ್ರೀ ವಿಶ್ವಕರ್ಮ ಜಯಂತಿ ವ್ಯವಸ್ಥಿತವಾಗಿ ಆಚರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 17ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶ್ರೀ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಗುತ್ತಿದ್ದು, ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಶ್ರೀ ವಿಶ್ವಕರ್ಮ ಜಯಂತಿ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ಶಿಷ್ಠಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪನ್ಯಾಸಕರ ಆಯ್ಕೆ, ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಸಮಾಜದ ಬಾಂಧವರು, ಹಿರಿಯರು, ಗಣ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು.

ಕೃಷಿ ಇಲಾಖೆಯ ನಿರ್ದೇಶಕರಿಗೆ ಎಚ್ಚರಿಕೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ನನಗೆ ಅಂದಾಜು ಮಾಹಿತಿ ಬೇಕಿಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ನಿರಂತರವಾಗಿ ಸುರಿದ ಮಳೆಯಿಂದ ಮುಂಗಾರು ಹಂಗಾಮಿನ ಹೆಸರು ಬೆಳೆ ಸೇರಿದಂತೆ ಬಿತ್ತನೆ ಮಾಡಿರುವ ಎಲ್ಲ ಬೆಳೆಗಳಿಗೂ ತೀವ್ರ ಹಾನಿ ಸಂಭವಿಸಿದೆ. ಹಿಗಿದ್ದರೂ ಕೂಡ ನೀವು ಅಂದಾಜು ಅಂಕಿ-ಅಂಶಗಳನ್ನು ನೀಡುತ್ತೀರಿ ಎಂದರೆ ಹೇಗೆ? ಯಾವುದೇ ಕಾರಣಕ್ಕೂ ರೈತರಿಗೆ ಅನ್ಯಾಯವಾದರೆ ನಾನು ಸಹಿಸುವುದಿಲ್ಲ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಜಿಲ್ಲಾ ಕೃಷಿ ಇಲಾಖೆಯ ಉಪ ನಿರ್ದೇಶಕರಿಗೆ ದೂರವಾಣಿ ಮೂಲಕ ಎಚ್ಚರಿಕೆ ನೀಡಿದರು.



ಇತ್ತೀಚೆಗೆ ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ಶಿಕ್ಷಕರ ದಿನಚಾರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ನಂತರ ಬೆಳೆ ಹಾನಿ ಕುರಿತು ತಾಲೂಕಾ ಮಟ್ಟದ ಅಧಿಕಾರಿಗಳಿಂದ ಮಾಹಿತಿ ಪಡೆದು, ಜಿಲ್ಲಾ ಉಪನಿರ್ದೇಶಕರಿಗೆ ಶಾಸಕ ಜಿ.ಎಸ್. ಪಾಟೀಲ ದೂರವಾಣಿ ಕರೆ ಮಾಡಿ ಮಾತನಾಡಿದರು.

ರೋಣ, ಗಜೇಂದ್ರಗಡ ತಾಲೂಕುಗಳು ಅತಿ ಹೆಚ್ಚು ಕೃಷಿ ಭೂಮಿಯನ್ನು ಹೊಂದಿವೆ. ಶೇ.80ಕ್ಕಿಂತ ಹೆಚ್ಚು ಜನರು ಕೃಷಿಯನ್ನು ನಂಬಿಕೊಂಡು ತಮ್ಮ ಜೀವನ ನಿರ್ವಹಿಸುತ್ತಿದ್ದಾರೆ. ಹಿಗಿರುವಾಗ ನೀವು ಕಚೇರಿಯಲ್ಲಿ ಕುಳಿತು ಅಂದಾಜು ಸಮೀಕ್ಷೆ ಅಂಕಿ-ಅಂಶಗಳನ್ನು ನೀಡಿದರೆ ಸರಿಯಲ್ಲ. ಬದಲಾಗಿ ವಸ್ತುಸ್ಥಿತಿ ಅರಿಯಲು ಅಧಿಕಾರಿಗಳ ಜೊತೆಗೆ ಖುದ್ದು ಜಮೀನುಗಳಿಗೆ ತೆರಳಿ ರೈತರಿಗೆ ಆಗಿರುವ ಹಾನಿಯನ್ನು ಪರಿಶೀಲಿಸುವ ಕಾರ್ಯವನ್ನು ಮಾಡಬೇಕು. ಹೊರತಾಗಿ ನೀವು ಅಂದಾಜು ಹಾನಿ ವರದಿ ನೀಡಿದರೆ ರೈತರಿಗೆ ನ್ಯಾಯ ಸಿಗುತ್ತದೆಯೇ ಎಂದು ಪ್ರಶ್ನಿಸಿದರಲ್ಲದೆ, ನಿಖರ ಮಾಹಿತಿಯ ಜೊತೆಗೆ ವರದಿಯನ್ನು ಸಲ್ಲಿಸಿ ಎಂದು ತಾಕೀತು ಮಾಡಿದರು.

ಪೂರ್ವಭಾವಿ ಸಭೆಯಲ್ಲಿ ಶಿಕ್ಷಕರ ದಿನಚಾರಣೆಯನ್ನು ಸೆ.8ಕ್ಕೆ ನಿಗದಿಗೊಳಿಸಲಾಗಿತ್ತು. ನಂತರ ಸೆ.8ರ ಬದಲಾಗಿ ಸೆ.6ರಂದು ಪಟ್ಟಣದ ಗುರುಭವನದಲ್ಲಿ ಶಿಕ್ಷಕರ ದಿನಾಚರಣೆಯನ್ನು ನಡೆಸಲು ತಿರ್ಮಾನಿಸಲಾಗಿದ್ದು, ಅದೇ ದಿನ 70 ಲಕ್ಷ ರೂ ವೆಚ್ಚದ ಗುರುಭವನದ ಮೇಲ್ಮಹಡಿ ನಿರ್ಮಾಣಕ್ಕೆ ಅಡಿಗಲ್ಲು ಕಾರ್ಯಕ್ರಮ ಜರುಗಲಿದೆ.

ತಾಲೂಕಾ ಮಟ್ಟದ ಅಧಿಕಾರಿಗಳು ಒಂದೆರಡು ಜಮೀನುಗಳಲ್ಲಿ ಜಂಟಿ ಸಮೀಕ್ಷೆ ನಡೆಸಿದರೆ ಸಾಲದು. ನಿರಂತರ ಮಳೆಯಿಂದ ರೈತರು ಎಷ್ಟು ನಷ್ಟ ಅನುಭವಿಸಿದ್ದಾರೆ ಎಂಬುದು ಸ್ಥಳೀಯ ಮಟ್ಟದಲ್ಲಿರುವ ನಿಮಗೆ ಅರ್ಥವಾಗಿರುತ್ತದೆ. ಇದನ್ನು ನಿಮ್ಮ ಹಿರಿಯ ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ಕರ್ತವ್ಯ ದಕ್ಷತೆಯನ್ನು ಮೆರೆಯಬೇಕು. ಒಟ್ಟಿನಲ್ಲಿ ರೈತರಿಗೆ ಅನುಕೂಲ ಕಲ್ಪಿಸುವ ಎಲ್ಲ ಕಾರ್ಯಗಳನ್ನು ಮಾಡಿ ಎಂದು ತಾಲೂಕಾ ಮಟ್ಟದ ಕೃಷಿ ಇಲಾಖೆಯ ಅಧಿಕಾರಿಗಳಿಗೂ ತಿಳಿಸಿದರು. ತಹಸೀಲ್ದಾರ್ ನಾಗರಾಜ ಕೆ, ಕಿರಣಕುಮಾರ, ತಾ.ಪಂ ಇಒ ಚಂದ್ರಶೇಖರ ಕಂದಕೂರು, ಎಸ್.ಎಫ್. ತಹಸೀಲ್ದಾರ, ಬಿಇಒ ಅರ್ಜುನ ಕಾಂಬೋಗಿ, ಆರ್.ಎಲ್. ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಪಾದಕೀಯ

# ಖಾಲಿ ಹುದ್ದೆಗಳು: ಸರ್ಕಾರದ ಮುಂದೆ ಇರುವ ಸವಾಲು

ಇತ್ತೀಚಿನ ವರದಿಗಳ ಪ್ರಕಾರ, ಕರ್ನಾಟಕದ ಆರು ಸರ್ಕಾರಿ ನೌಕರರಲ್ಲಿ ಒಬ್ಬರು ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದಾರೆ ಎಂಬುದು ಆತಂಕಕಾರಿ ಸಂಗತಿಯಾಗಿದೆ. ಇದು ಸರ್ಕಾರಿ ನೇಮಕಾತಿ ವ್ಯವಸ್ಥೆಯಲ್ಲಿರುವ ಗಂಭೀರ ಸಮಸ್ಯೆಯನ್ನು ಎತ್ತಿ ತೋರಿಸುತ್ತದೆ.

ಸರ್ಕಾರಿ ಇಲಾಖೆಗಳಲ್ಲಿನ ಸಾವಿರಾರು ಹುದ್ದೆಗಳು ಖಾಲಿ ಇರುವುದು, ಅಧಿಕಾರಿ ವರ್ಗದ ಮೇಲೆ ಕೆಲಸದ ಒತ್ತಡವನ್ನು ಹೆಚ್ಚಿಸುತ್ತಿದೆ. ಇದರ ಜೊತೆಗೆ, ರಾಜ್ಯದಲ್ಲಿ 2.84 ಲಕ್ಷ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆಡಳಿತಾರೂಢ ಕಾಂಗ್ರೆಸ್ ಸರ್ಕಾರವು ಚುನಾವಣಾ ಪೂರ್ವದಲ್ಲಿ ಭರವಸೆ ನೀಡಿತ್ತು.

ಇದು ಯುವ ಸಮುದಾಯಕ್ಕೆ ಹೊಸ ಭರವಸೆ ಮೂಡಿಸಿತ್ತು. ಆದರೆ, ಈ ಭರವಸೆಯನ್ನು ಈಡೇರಿಸಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ತೀವ್ರ ಒತ್ತಡದಲ್ಲಿದೆ. ನಿರುದ್ಯೋಗ ಸಮಸ್ಯೆಯು ಯುವಕರ ಭವಿಷ್ಯದ ಮೇಲೆ ಪರಿಣಾಮ ಬೀರುತ್ತಿದ್ದು, ಈ ಖಾಲಿ ಹುದ್ದೆಗಳು ಭರ್ತಿಯಾದರೆ, ಸಾವಿರಾರು ಯುವಕರಿಗೆ ಉದ್ಯೋಗ ದೊರೆಯಲಿದೆ.

ಗುತ್ತಿಗೆ ಆಧಾರಿತ ನೇಮಕಾತಿಗಳು ಸರ್ಕಾರದ ಸೇವೆಗಳ ಗುಣಮಟ್ಟದ ಮೇಲೂ ಪರಿಣಾಮ ಬೀರುತ್ತಿವೆ. ಗುತ್ತಿಗೆ ನೌಕರರಿಗೆ ಭದ್ರತೆ ಮತ್ತು ಇತರ ಸೌಲಭ್ಯಗಳು ದೊರೆಯುವುದಿಲ್ಲ. ಈ ಸಮಸ್ಯೆ ಪರಿಹಾರಕ್ಕೆ ಸರ್ಕಾರವು ಗುತ್ತಿಗೆ ಪದ್ಧತಿಯನ್ನು ಕಡಿಮೆ ಮಾಡಿ, ನೇರ ನೇಮಕಾತಿಗಳನ್ನು ಆದ್ಯತೆಯ ಮೇಲೆ ಕೈಗೊಳ್ಳಬೇಕು.

ಇದು ಸರ್ಕಾರಿ ಸೇವೆಗಳ ದಕ್ಷತೆಯನ್ನು ಹೆಚ್ಚಿಸುವುದಲ್ಲದೆ, ನೌಕರರಲ್ಲಿ ಸ್ಥಿರತೆ ಮತ್ತು ವಿಶ್ವಾಸ ಮೂಡಿಸುತ್ತದೆ.

ಸಾರ್ವಜನಿಕ ಸೇವೆಗಳನ್ನು ಬಲಪಡಿಸಲು ಮತ್ತು ಚುನಾವಣಾ ಭರವಸೆಗಳನ್ನು ಈಡೇರಿಸಲು, ಸರ್ಕಾರವು ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವತ್ತ ಗಮನ ಹರಿಸಬೇಕು. ಇದು ಆಡಳಿತದ ಮೇಲಿನ ನಂಬಿಕೆಯನ್ನು ಹೆಚ್ಚಿಸುತ್ತದೆ ಮತ್ತು ರಾಜ್ಯದ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ.

## ಸಂತಾನಹರಣ ಚಿಕಿತ್ಸೆಗೆಂದು ಆಸ್ಪತ್ರೆಗೆ ದಾಖಲಾಗಿದ್ದ ತಾಯಿ ಸಾವು– ವೈದ್ಯರ ಮೇಲೆ ಗಂಭೀರ ಆರೋಪ!

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳದ ಹಿರೇವಂಕಲಕುಂಟ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಂತಾನಹರಣ ಚಿಕಿತ್ಸೆಗೆಂದು ಆಸ್ಪತ್ರೆಗೆ ದಾಖಲಾಗಿದ್ದ ತಾಯಿ ಸಾವನ್ನಪ್ಪಿರುವ ಘಟನೆ ಜರುಗಿದೆ.

23 ವರ್ಷದ ಮಲ್ಲಮ್ಮ ಕಲ್ಲೂರ್ ಮೃತ ಮಹಿಳೆ. ಮಲ್ಲಮ್ಮ ಅವರಿಗೆ ಎರಡೂವರೆ ವರ್ಷದ ಹಾಗೂ ಐದು ತಿಂಗಳ ಎರಡು ಮಕ್ಕಳಿದ್ದು, ಈ ಹಿನ್ನೆಲೆ ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ನಿರ್ಧರಿಸಿದ್ದರು.

ಸೋಮವಾರ ಸಂತಾನಹರಣ ಚಿಕಿತ್ಸೆಗೆಂದು ಕೊಪ್ಪಳದ ಹಿರೇವಂಕಲಕುಂಟ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಾಗಿದ್ದರು. ಮಂಗಳವಾರ ಸಂತಾನಹರಣ ಚಿಕಿತ್ಸೆ ವೇಳೆ ವೈದ್ಯರ ಎಡವಟ್ಟಿನಿಂದಾಗಿ ಮಲ್ಲಮ್ಮ ಅವರ ಸ್ಥಿತಿ ಗಂಭೀರವಾಗಿದ್ದು, ಕೂಡಲೇ ಜಿಲ್ಲಾ ಆಸ್ಪತ್ರೆಗೆ ಕಳುಹಿಸಿದ್ದಾರೆ. ಮಾರ್ಗಮಧ್ಯೆಯೇ ಮಲ್ಲಮ್ಮ ಸಾವನ್ನಪ್ಪಿದ್ದಾರೆ.

### ಆಬಾಲವೃದ್ಧರಾದಿಯಾಗಿ ಎಲ್ಲರೂ ಪ್ರೀತಿಸುವ ಗಣೇಶ ನಮಗೆ ಕಲಿಸುವ ಪಾಠಗಳು

# ವಿಗ್ರಹ ಒಂದು, ಸಂಕೇತಗಳು ನೂರು



ಗಣಪತಿ, ಗಜಾನನ, ಗಣೇಶ, ಗಣನಾಯಕ, ವಿನಾಯಕ, ಲಂಬೋದರ, ವಕ್ರತುಂಡ, ಮಹಾಕಾಯ ಎಂದು ನೂರೆಂಟು ಹೆಸರುಗಳಿಂದ ನಾವು ಭಕ್ತಿಯಿಂದ ಕರೆಯುವ, ಪೂಜಿಸುವ ಮತ್ತು ಆಬಾಲವೃದ್ಧರಾದಿಯಾಗಿ ಎಲ್ಲರೂ ಪ್ರೀತಿಸುವ ದೈವ ಗಣಪತಿ.

ಪಾರ್ವತಿಯ ಮಾಯದ ಮಗನಾಗಿ ತಾಯಿಯು ಸ್ನಾನ ಗೃಹಕ್ಕೆ ಹೋದಾಗ ಮನೆಯನ್ನು ಕಾಯುತ್ತಿದ್ದು, ಸಾಕ್ಷಾತ್ ಪರಶಿವನನ್ನು ಮನೆಯ ಒಳಗೆ ಹೋಗಲು ಬಿಡದೆ ಶಿವನಿಂದ ಶಿರ ಕತ್ತರಿಸಲ್ಪಟ್ಟನು. ಮತ್ತೆ ತಾಯಿ ಪಾರ್ವತಿಯ ಕೋರಿಕೆಯ ಮೇರೆಗೆ ದೇವಾದಿ ದೇವ ಮಹಾದೇವನು ಉತ್ತರ ದಿಕ್ಕಿಗೆ ತಲೆ ಮಾಡಿ ಸತ್ತು ಬಿದ್ದಿರುವ ಆನೆಯ ತಲೆಯನ್ನು ತಂದು ಮಗುವಿನ ಮುಂಡಕ್ಕೆ ಜೋಡಿಸಿ ಗಜಾನನನ್ನಾಗಿಸಿ ಖುದ್ದು ಶಿವನೇ ಬಾಲಕನಲ್ಲಿ ಪ್ರಾಣ ಪ್ರತಿಷ್ಠೆ ಮಾಡಿ ಆತನನ್ನು ತನ್ನ ಶಿವಗಣಗಳಿಗೆ ನಾಯಕನನ್ನಾಗಿಸಿದ ಎಂಬುದು ನಾವೆಲ್ಲರೂ ಓದಿರುವ ಪುರಾಣದ ಕಥೆ.

ಅದೆಷ್ಟೇ ಗಣಪತಿಯ ಹುಟ್ಟು ಮತ್ತು ಶಿರ ಜೋಡಿಸಿದ ಕುರಿತು ಬುದ್ಧಿಜೀವಿಗಳೆನಿಸಿಕೊಂಡವರು ವ್ಯಂಗ್ಯ ಮಾಡಿದರೂ ಕೂಡ ಕನಿಷ್ಠ ಧಾರ್ಮಿಕ ಪ್ರಜ್ಞೆಯುಳ್ಳ ಜನರು ತಮ್ಮ ಮನೆಗಳಲ್ಲಿ ಪೂಜೆಯನ್ನು ಕೈಗೊಳ್ಳುವಾಗ ಯಾವುದೇ ವಿಘ್ನಗಳು ಬಾರದಿರಲಿ ಎಂದು ಗಣೇಶನನ್ನು ಪೂಜಿಸುತ್ತಾರೆ. ಆದ್ದರಿಂದಲೇ ಗಣೇಶನಿಗೆ 'ಪ್ರಥಮ ಪೂಜಿತ' ಎಂದು ಕರೆಯುತ್ತಾರೆ. ವಿಘ್ನವನ್ನು ಪರಿಹರಿಸುವ ವಿಘ್ನ ವಿನಾಯಕನಾಗಿ, ವಿಘ್ನೇಶ್ವರನಾಗಿ ಆತ ನಮ್ಮ ಮನೆ ಮನಗಳಲ್ಲಿ ಒಡಮೂಡಿದ್ದಾನೆ.

ಇನ್ನು ಮಕ್ಕಳ ಪಾಲಿಗೆ ಗಣಪತಿ ಒಬ್ಬ ಫ್ರೆಂಡ್, ಫಿಲಾಸಫರ್, ಗೈಡ್ ಎಂದು ಅವರು ಭಾವಿಸಿಕೊಂಡಿದ್ದರೆ ಅದರಲ್ಲಿ ತಪ್ಪಿಲ್ಲ. ಅದರಲ್ಲೂ ಇತ್ತೀಚಿನ ದಶಕಗಳಲ್ಲಿ ಗಣೇಶನ ಕಾರ್ಟೂನ್ ಚಿತ್ರಗಳು ಮತ್ತು ಚಲನಚಿತ್ರಗಳು ಗಣೇಶನನ್ನು ಮಕ್ಕಳಿಗೆ ಮತ್ತಷ್ಟು ಆಪ್ತವಾಗಿಸಿವೆ. ಅದೇನೋ ಗಣಪತಿಯ ಗುಂಡು ಗುಂಡಾಗಿರುವ ದೇಹ, ಮುದ್ದಾದ ಆನೆಯ ಮುಖ ಮಕ್ಕಳನ್ನು ಆಕರ್ಷಿಸಿದರೆ, ಗಣೇಶ ಕೂಡ ತಮ್ಮಂತೆ ಪುಟ್ಟ ಮಗು ಎಂಬ ಭಾವ ಅವರಲ್ಲಿ ಸ್ಫುರಿಸಬಹುದೇನೋ!

ಎಲ್ಲ ವಿದ್ಯೆಗಳ ಅಧಿದೇವತೆಯಾಗಿರುವ ಇಂತಹ ಗಣೇಶನಿಗೆ ವಿದ್ಯಾದೇವತೆ ಎಂದು ಕೂಡ ಕರೆಯುತ್ತಾರೆ. ಒಂದು ಆಖ್ಯಾಯಿಕೆಯ ಪ್ರಕಾರ ಗಣೇಶನಿಗೆ ವಿಶ್ವಕರ್ಮನು ಶಿರವನ್ನು ಜೋಡಿಸುವಾಗ ತನ್ನ ಮಕ್ಕಳಾದ ಸಿದ್ಧಿ–ಬುದ್ಧಿಯರನ್ನು ಆತನಿಗೆ ಕೊಟ್ಟು ಮದುವೆ ಮಾಡಿದನು. ಪೂಜಿಸುವವರಿಗೆ ಅವರ ಕಾರ್ಯದಲ್ಲಿ ಸಿದ್ಧಿಯಾಗುವ ಮತ್ತು ಅವರ ಬುದ್ಧಿ ಚುರುಕಾಗುವ ಕಾರಣವೇ ಗಣೇಶನನ್ನು ಪೂಜಿಸುವ ಆರಾಧಿಸುವ ಜನರಿಗೆ ಆತ ಅಭಯಪ್ರದನು, ಸಂಕಟ ನಿವಾರಕನೂ ಆಗಿದ್ದಾನೆ. ಆದ್ದರಿಂದಲೇ ಆತನನ್ನು ಸಂಕಷ್ಟಹರ ಎಂದು ಕೂಡ ಕರೆಯುತ್ತಾರೆ.

ಗಣೇಶನ ದೈಹಿಕ ಆಕಾರವು ಹಲವಾರು ವಿಷಯಗಳನ್ನು ಪ್ರತಿನಿಧಿಸುವ ಮೂಲಕ ನಮಗೆ ಕೆಲವು ಸ್ಪಷ್ಟ ಸಂದೇಶಗಳನ್ನು ನೀಡುತ್ತದೆ. ದೇಹಕ್ಕಿಂತ ತುಸು ದೊಡ್ಡದೇ ಎನಿಸುವ ಆತನ ತಲೆ 'ಯಾವಾಗಲೂ ಹಿರಿದಾದುದನ್ನು ಯೋಚಿಸು' ಎಂದು ನಮಗೆ ಹೇಳುತ್ತದೆ. ಉನ್ನತ ವಿಚಾರಧಾರೆಗಳು ವ್ಯಕ್ತಿಯ ವ್ಯಕ್ತಿತ್ವಕ್ಕೆ ಕಳಶಪ್ರಾಯವಾಗಿರುತ್ತದೆ ಎಂಬ ಮಾತನ್ನು ಗಣೇಶನ ದೊಡ್ಡ ತಲೆಯು ಪ್ರತಿನಿಧಿಸುತ್ತದೆ.

ಗಣೇಶನ ಪುಟ್ಟ ಬಾಯಿ 'ಅತ್ಯಂತ ಕಡಿಮೆ ಮಾತನಾಡು' ಎಂದು ಹೇಳಿದರೆ ಆತನ ಮೊರದಗಲದ ಕಿವಿಗಳು 'ಬೇರೆಯವರು ಹೇಳುವುದನ್ನು ಹೆಚ್ಚು ಕೇಳಿಸಿಕೋ' ಎಂದೂ, ನೀನು ಮಾತನಾಡುವುದಕ್ಕಿಂತ ಹೆಚ್ಚು ಹೆಚ್ಚು ಒಳ್ಳೆಯ ವಿಚಾರಗಳನ್ನು ಕೇಳುವ ಮೂಲಕ ನಿಮ್ಮ ಜ್ಞಾನವನ್ನು, ಅನುಭವವನ್ನು ವಿಸ್ತರಿಸಿಕೊ ಎಂದು ನಮಗೆ ಹೇಳುತ್ತದೆ.

ಏಕದಂತ, ವಕ್ರತುಂಡ ಎಂದು ಕರೆಯಲ್ಪಡುವ ಗಣಪತಿಗೆ ಇರುವ ಒಂದು ಹಲ್ಲು ಒಳ್ಳೆಯದನ್ನು ಉಳಿಸಿಕೊಳ್ಳುವ ಕುರಿತು ನಮಗೆ ಎಚ್ಚರಿಸಿದರೆ, ಮುರಿದ ಇನ್ನೊಂದು ಹಲ್ಲು ಕೆಟ್ಟದ್ದನ್ನು ಸಾರಾಸಗಟಾಗಿ ತಿರಸ್ಕರಿಸು, ಮುರಿದು ಹಾಕು ಎಂಬುದನ್ನು ಪ್ರತಿನಿಧಿಸುತ್ತದೆ. ಲಂಬೋದರ ಎಂದು ಕರೆಸಿಕೊಳ್ಳುವ ಗಣೇಶನ ದೊಡ್ಡ ಡೊಳ್ಳು ಹೊಟ್ಟೆಯು 'ಜೀವನದಲ್ಲಿ ಬರುವ ಎಲ್ಲಾ ಕಷ್ಟ ಸುಖಗಳನ್ನು, ನೋವು ನಲಿವುಗಳನ್ನು, ಏರಿಳಿತಗಳನ್ನು ಅರಗಿಸಿಕೊಂಡು ಬಾಳು' ಎಂಬುದನ್ನು ಸಾಂಕೇತಿಕವಾಗಿ ಸೂಚಿಸುತ್ತದೆ.

ಗಜಾನನನ ಪುಟ್ಟ ಪುಟ್ಟ ಕಣ್ಣುಗಳು 'ಅತ್ಯಗತ್ಯವಾದ ವಿಷಯಗಳ ಮೇಲೆ ಮಾತ್ರ ನಮ್ಮ ಗಮನ ಸದಾ ಇರಲಿ' ಎಂಬುದನ್ನು ಸೂಚಿಸುತ್ತದೆ. ಗಣೇಶನ ಪುಟ್ಟ ನಯನಗಳು ಸೂಕ್ಷ್ಮಾತಿಸೂಕ್ಷ್ಮ ವಿಷಯಗಳ ಕುರಿತು ಚಿಂತಿಸಲು ನಮಗೆ ನಿರ್ದೇಶಿಸುತ್ತವೆ. ಗಣೇಶನ ಕೈಯಲ್ಲಿರುವ ಪಾಶವು ಪ್ರೀತಿಪಾತ್ರರೊಂದಿಗೆ ಸ್ನೇಹಿತರೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಬೇಕಾದ ಅಗತ್ಯತೆಯ ಅರಿವನ್ನು ಮೂಡಿಸುತ್ತದೆ.

ಗಣೇಶನ ಹಿರಿದಾದ ಸೊಂಡಿಲು ದಕ್ಷತೆಯ ಸಂಕೇತ. ಎಲ್ಲಾ ಒಳ್ಳೆಯ ವಿಚಾರಗಳನ್ನು ಅರಗಿಸಿಕೊಳ್ಳುವ, ನಮ್ಮದಾಗಿಸಿಕೊಳ್ಳುವ ನಿಟ್ಟಿನಲ್ಲಿ ಬೇಕಾಗುವ ದೃಢತೆ ಮತ್ತು ಹೊಂದಾಣಿಕೆಯ ಮನೋಭಾವವನ್ನು ನಾವು ಹೊಂದಿರಬೇಕು ಎಂಬುದನ್ನು ಗಣೇಶನ ಸೊಂಡಿಲು ಪ್ರತಿಪಾದಿಸುತ್ತದೆ. ಮೂಷಿಕ ವಾಹನ ಎಂದು ಕರೆದುಕೊಳ್ಳುವ ಅಗಾಧ ದೇಹದ ಗಣೇಶನಿಗೆ ಪುಟ್ಟ ಇಲಿ ವಾಹನವಾಗಿದ್ದು ಈ ಇಲಿಯು ನಮ್ಮಲ್ಲಿರುವ ಅತಿಯಾದ ಆಸೆ–ಆಕಾಂಕ್ಷೆಗಳನ್ನು ಪ್ರತಿನಿಧಿಸುತ್ತದೆ.

ಮೋದಕ ಹಸ್ತ ಎಂದು ಕರೆಸಿಕೊಳ್ಳುವ ಗಣೇಶ ನಮಗೆ ಆತನ ದೇಹದ ಅಂಗಗಳು ಸೂಚಿಸುವ ಸಾಂಕೇತಿಕ ಲಕ್ಷಣಗಳನ್ನು ನಾವು ನಮ್ಮದಾಗಿಸಿಕೊಂಡರೆ ಅದಕ್ಕೆ ಪ್ರತಿಫಲವಾಗಿ ನಮಗೆ ಬದುಕಿನಲ್ಲಿ ಯಶಸ್ಸು, ಸಮೃದ್ಧಿ ದೊರೆ–ಯುತ್ತದೆ ಎಂಬುದನ್ನು ಮೋದಕದ ರೂಪದಲ್ಲಿ ತೋರುತ್ತಾನೆ. ನಮ್ಮ ಬದುಕಿನ ಉತ್ತಮ ನಡಾವಳಿಗಳಿಗೆ ನಾವು ಗಣೇಶನಿಂದ ಮೋದಕವನ್ನು ಪ್ರಸಾದದ ರೂಪದಲ್ಲಿ ಆಶೀರ್ವಾದದ ರೂಪದಲ್ಲಿ ಪಡೆಯುತ್ತೇವೆ ಎಂಬುದು ಇದರ ಅರ್ಥ.

**– ವೀಣಾ ಹೇಮಂತ್‌ಗೌಡ ಪಾಟೀಲ್.**
ಮುಂಡರಗಿ, ಗದಗ.

## ಹಿರಿಯ ಕಲಾವಿದರಿಂದ ಸಿಎಂ ಭೇಟಿ: ಈ ಇಬ್ಬರಿಗೆ ಮರಣೋತ್ತರ 'ಕರ್ನಾಟಕ ರತ್ನ' ಪ್ರಶಸ್ತಿ ನೀಡುವಂತೆ ಮನವಿ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹಿರಿಯ ಕಲಾವಿದರ ತಂಡ ಮಂಗಳವಾರ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ದಿವಂಗತ ವಿಷ್ಣುವರ್ಧನ್ ಹಾಗೂ ಬಿ. ಸರೋಜಾದೇವಿಗೆ ಮರಣೋತ್ತರ 'ಕರ್ನಾಟಕ ರತ್ನ' ಪ್ರಶಸ್ತಿ ನೀಡುವಂತೆ ಮನವಿ ಮಾಡಿದ್ದಾರೆ.

ಎಸ್, ಕನ್ನಡ ಚಿತ್ರರಂಗದ ಹಿರಿಯ ಕಲಾವಿದರಾದ ವಿಷ್ಣುವರ್ಧನ್ ಹಾಗೂ ಬಿ. ಸರೋಜಾದೇವಿ ಅವರಿಗೆ ಮರಣೋತ್ತರವಾಗಿ 'ಕರ್ನಾಟಕ ರತ್ನ' ಪ್ರಶಸ್ತಿ ನೀಡಬೇಕು ಎಂದು ಅಭಿಮಾನಿಗಳು ಒತ್ತಾಯಿಸುತ್ತಿದ್ದಾರೆ.

## ದೆಹಲಿ ಗಲಭೆ ಪ್ರಕರಣ: ಉಮರ್ ಖಾಲಿದ್, ಶಾರ್ಜೀಲ್ ಇಮಾಮ್ ಸೇರಿ 9 ಮಂದಿಯ ಜಾಮೀನು ಅರ್ಜಿ ವಜಾ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೆಹಲಿ ಗಲಭೆಗೆ (2020) 'ದೊಡ್ಡ ಮಟ್ಟದ ಪಿತೂರಿ' ರೂಪಿಸಿದ ಆರೋಪ ಪ್ರಕರಣದಲ್ಲಿ ಉಮರ್ ಖಾಲಿದ್, ಶಾರ್ಜೀಲ್ ಇಮಾಮ್ ಮತ್ತು ಇತರ ಏಳು ಆರೋಪಿಗಳು ಸಲ್ಲಿಸಿದ್ದ ಜಾಮೀನು ಅರ್ಜಿಗಳನ್ನು ದೆಹಲಿ ಹೈಕೋರ್ಟ್ ಮಂಗಳವಾರ (ಸೆ.2) ವಜಾಗೊಳಿಸಿದೆ.

ನ್ಯಾಯಮೂರ್ತಿಗಳಾದ ನವೀನ್ ಚಾವ್ಲಾ ಮತ್ತು ಶಾಲಿಂದರ್ ಕೌರ್ ಅವರ ವಿಭಾಗೀಯ ಪೀಠವು ಜಾಮೀನು ನಿರಾಕರಿಸಿ ತೀರ್ಪು ಪ್ರಕಟಿಸಿದೆ.

### ಅನ್ನದಾನೇಶ್ವರ ಅಂಗ ಸಂಸ್ಥೆಗಳ ನೌಕರರ ಸಭೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ

# ಸಮಸ್ಯೆಗಳಿಗೆ ಸಂಘಟನೆಯೊಂದೇ ಪರಿಹಾರ



ಶ್ರೀ ಅನ್ನದಾನೇಶ್ವರ ಬಾಲಿಕೆಯರ ಪ್ರೌಢಶಾಲೆಯ ಕಟ್ಟಡಕ್ಕೆ ಈ ಹಿಂದೆ ನೀಡಿದ ವಾಗ್ದಾನದಂತೆ 10 ಲಕ್ಷ ರೂ.ಗಳನ್ನು ಸಭಾಪತಿ ಹೊರಟ್ಟಿ ಬಿಡುಗಡೆಗೊಳಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಗೆ ಈ ಹಿಂದೆ ಘೋಷಿಸಿದ್ದ 5 ಲಕ್ಷ ರೂ.ಗಳ ಅನುದಾನ ಬಿಡುಗಡೆಗೊಳಿಸಲು ಸಭಾಪತಿ ಹೊರಟ್ಟಿಯವರಿಗೆ ವಿನಂತಿಸಿದರು.

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ಸಮಸ್ಯೆಗಳಿಗೆ ಸಂಘಟನೆಯ ಹೋರಾಟವೇ ಪರಿಹಾರವಾಗಿದ್ದು, ನೀವೆಲ್ಲ ಸಂಘಟನೆಯೊಂದಿಗೆ ಕೈಜೋಡಿಸುವ ಅವಶ್ಯಕತೆ ಇದೆ. ಮಾಧ್ಯಮಿಕ ಶಾಲಾ ನೌಕರರ ಸಂಘಟನೆಯು ಈ ಹಿಂದಿನಿಂದಲೂ ತನ್ನ ಸಮಸ್ಯೆಗಳಿಗೆ ಹೋರಾಟದ ಮೂಲಕ ಪರಿಹಾರಗಳನ್ನು ಕಾಣುತ್ತ ಬಂದಿದ್ದು, ಎಲ್ಲರೂ ಸಂಘಟನೆಗೆ ಬಲ ತುಂಬಬೇಕು ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ಅನ್ನದಾನೇಶ್ವರ ಅಂಗ ಸಂಸ್ಥೆಗಳ ನೌಕರರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಪಟ್ಟಣದ ಕಿವುಡ–ಮೂಗ ಶಾಲೆಯ ನೌಕರರ ಅನುದಾನ 37 ಲಕ್ಷ ರೂ ಬಾಕಿ ಉಳಿದದ್ದನ್ನು ತಿಳಿದ ಹೊರಟ್ಟಿಯವರು ಸಚಿವೆ ಹೆಬ್ಬಾಳಕರ ಮತ್ತು ಆಯುಕ್ತರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಅನುದಾನ ಬಿಡುಗಡೆಗೆ ವ್ಯವಸ್ಥೆ ಮಾಡಿದರು. ನೂತನ ಎಲ್‌ಬಿಎ ಪರೀಕ್ಷಾ ಪದ್ಧತಿಯ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದ ಹೊರಟ್ಟಿಯವರು, ಈ ಹಿಂದಿನ ಪರೀಕ್ಷಾ ವ್ಯವಸ್ಥೆಯನ್ನು ಜಾರಿಗೆ ತರಲು ಸಾಧ್ಯವಿದೆಯೇ ಎಂಬುದನ್ನು ಗಮನಿಸಲು ತಿಳಿಸಿದರು.

ಶ್ರೀ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ವತಿಯಿಂದ ಪ್ರಾಚಾರ್ಯ ವೈ.ಸಿ. ಪಾಟೀಲ ಸಭಾಪತಿ ಹೊರಟ್ಟಿಯವರನ್ನು ಸನ್ಮಾನಿಸಿ ಮಾತನಾಡಿದರು. ಸಭೆಯಲ್ಲಿ ಶ್ರೀ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಎಲ್ಲ ಅಂಗ ಸಂಸ್ಥೆಗಳ ಮುಖ್ಯಸ್ಥರು, ಶಿಕ್ಷಕರು, ನೌಕರರು ಪಾಲ್ಗೊಂಡಿದ್ದರು.

ವೇದಿಕೆಯ ಮೇಲೆ ಆಡಳಿತ ಮಂಡಳಿ ಚೇರಮನ್ ಡಾ. ಎಸ್.ಎ. ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ, ಮುಖ್ಯ ಶಿಕ್ಷಕ ಎಂ.ಬಿ. ಸಜ್ಜನ ಇದ್ದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಸ್ವಾಗತಿಸಿ, ವಂದಿಸಿದರು.

## ಮುಸ್ಲಿಂ ವಿದ್ಯಾರ್ಥಿಯಿಂದ ಗಣೇಶನ ಪೂಜೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಸರ್ವರ ವಿಘ್ನಗಳನ್ನು ನಿವಾರಿಸುವ ವಿಘ್ನೇಶ್ವರನನ್ನು ಸಕಲರೂ ಪೂಜಿಸುತ್ತಾರೆ. ಆದರೆ ಮುಸ್ಲಿಂ ಸಮಾಜದವರು ಪೂಜೆ ಮಾಡುವದು ಅಪರೂಪ. ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್‌ನಲ್ಲಿ 10ನೇ ತರಗತಿಯಲ್ಲಿ ಓದುತ್ತಿರುವ ಮುಕ್ತುಂಸಾಬ ರಾಜೇಸಾಬ ಕಲೆಗಾರ ಎನ್ನುವ ವಿದ್ಯಾರ್ಥಿ ಕಳೆದ 3 ವರ್ಷಗಳಿಂದ ಗಣೇಶನನ್ನು ತಾನೇ ತಯಾರಿಸಿ ಪೂಜೆ ಸಲ್ಲಿಸುತ್ತಿರುವದು ವಿಶೇಷವಾಗಿದೆ.

ಉಮಾವಿದ್ಯಾಲಯ ಹೈಸ್ಕೂಲ್ ಹಿಂದುಗಡೆ ಇರುವ ಜಾಗೆಯಲ್ಲಿ ಗುಡಿಸಲಿನಲ್ಲಿ ವಾಸಿಸುವ ರಾಜೇಸಾಬ ಕಲೆಗಾರರ ಪುತ್ರ ಮುಕ್ತುಂಸಾಬ. ಎಲ್ಲೆಡೆ ಗಣೇಶನ ಪೂಜೆ ಮಾಡುವದು, ಅದನ್ನು ತಯಾರಿಸುವದನ್ನು ನೋಡುತ್ತಿದ್ದ ಈತ ಕಳೆದ 2–3 ವರ್ಷಗಳ ಹಿಂದೆ ತಾನೇ ಮಣ್ಣು ತಂದು, ತನಗೆ ತಿಳಿದ ರೀತಿಯಲ್ಲಿ ಗಣೇಶನ ಮೂರ್ತಿ ಸಿದ್ಧಪಡಿಸಿ ಪೂಜಿಸಿದ್ದಾನೆ.

ಈ ವರ್ಷವೂ ಈತ ಮೂರ್ತಿಯನ್ನು ಸಿದ್ಧಪಡಿಸಿ ಗುಡಿಸಿಲಿನ ಪಕ್ಕದ ಜಾಗೆಯಲ್ಲಿಯೇ ಅಳಿದುಳಿದ ಬಟ್ಟೆ ಕಟ್ಟಿ, ಮುರಿದ ಹಲಗೆಯನ್ನು ಹಾಕಿ ಅದರ ಮೇಲೆ ಗಣೇಶನನ್ನು ಕೂರಿಸಿ ಪೂಜೆ ಸಲ್ಲಿಸಿದ್ದಾನೆ.

ನಾಲ್ಕನೇ ದಿನವಾದ ಶನಿವಾರ ಸುತ್ತಮುತ್ತಲಿನ ತನ್ನ ಗೆಳೆಯರನ್ನು ಕರೆದು ಪ್ರಸಾದ ರೂಪದಲ್ಲಿ ಸಿಹಿ ಮತ್ತು ಚಿತ್ರಾನ್ನ ತಯಾರಿಸಿ ಊಟ ಹಾಕಿರುವದು ಆತನ ವಿಶೇಷ ಭಕ್ತಿಗೆ ಸಾಕ್ಷಿಯಾಗಿದೆ. 5ನೇ ದಿನವಾದ ಭಾನುವಾರ ಮುಂಜಾನೆಯೇ ಮೂರ್ತಿಯನ್ನು ಕೆರೆಯಲ್ಲಿ ವಿಸರ್ಜಿಸಿ ಬಂದಿದ್ದಾನೆ. ಈ ಕುರಿತು ಆತನನ್ನು ಪ್ರಶ್ನಿಸಿದಾಗ ಎಲ್ಲರೂ ಮಾಡುವದು ನೋಡಿ ನನಗೆ ಗಣೇಶನ ಕೂಡಿಸುವ ಆಸೆಯಾಗಿತ್ತು, ಅದರಂತೆ ಎರಡು ವರ್ಷಗಳಿಂದ ಮಾಡುತ್ತಾ ಬಂದಿದ್ದೇನೆ. ಇದರಿಂದ ನನಗೆ ಒಳ್ಳೆಯದಾಗುವದೆಂಬ ಭರವಸೆಯಿದೆ ಎನ್ನುತ್ತಾನೆ.

ಈತನ ಭಕ್ತಿಯ ಕುರಿತು ಯಲ್ಲಪ್ಪ ಬೆಳವಗಿ ಎಂಬುವರು ಪತ್ರಕರ್ತರಿಗೆ ಮಾಹಿತಿ ನೀಡಿದ್ದಾರೆ.




ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರ ಸಹಯೋಗದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಸೈಕ್ಲಿಂಗ್ ಜಾಥಾಕ್ಕೆ ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಸಾಥ್ ನೀಡಿತು. ಲಯನ್ಸ್ ಕ್ಲಬ್‌ನ ಪಿಡಿಜಿ ಆನಂದ ಪೋತ್ನೀಸ್, ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಕ್ಲಬ್‌ನ ಹಿರಿಯ ಸದಸ್ಯರಾದ ಡಾ. ವಿಜಯಕುಮಾರ ಸಜ್ಜನರ, ಡಾ. ಜಗದೀಶ ಶಿರೋಳ, ಡಾ. ಹಿರೇಗೌಡ್ರ, ಎಸ್.ಡಿ. ಪಾಟೀಲ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ರಮೇಶ ಶಿಗ್ಲಿ, ರವಿ ಶಿವಪ್ಪಗೌಡ್ರ, ಡಾ. ಬಿಡಿನಹಾಳ, ಸುರೇಶ ಕುಂಬಾರ ಮುಂತಾದವರಿದ್ದರು.

## ರಾಜ್ಯ ಮಟ್ಟಕ್ಕೆ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**



ಸಮಿಪದ ಕಣವಿ ಗ್ರಾಮದ ಕೆ.ಜಿ.ಎಸ್ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಸುಮೇರಾ ಕಳ್ಳಿಮನಿ ಜಿಲ್ಲಾ ಮಟ್ಟದ ವಿಜ್ಞಾನ ವಿಚಾರಗೋಷ್ಠಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ವಿಜ್ಞಾನ ವಿಚಾರಗೋಷ್ಠಿಗೆ ಆಯ್ಕೆಯಾಗಿದ್ದಾಳೆ.

ಈ ವಿದ್ಯಾರ್ಥಿನಿಗೆ ಡಿಡಿಪಿಐ ಆರ್.ಎಸ್. ಬುರಡಿ, ಬಿಇಓ ವಿ.ವಿ. ನಡುವಿನಮನಿ ಸೇರಿದಂತೆ ಶಾಲಾ ಆಡಳಿತ ಮಂಡಳಿ, ಶಿಕ್ಷಕರು ಅಭಿನಂದಿಸಿದ್ದಾರೆ.

# ಶಿಕ್ಷಣದಷ್ಟೇ ಕ್ರೀಡೆಯೂ ಅಗತ್ಯವಾಗಿದೆ

**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**



ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಕಲಿಕೆಯ ಜೊತೆ–ಗೆ ಮಕ್ಕಳಲ್ಲಿ ಕ್ರೀಡಾಸಕ್ತಿಯೂ ಅತ್ಯಮೂಲ್ಯವಾದದ್ದು ಎಂದು ಬಿಇಓ ಎಚ್ ಲೇಪಾಕ್ಷಪ್ಪ ತಿಳಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಸೋಮವಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶೃಂಗಾರತೋಟದ ವತಿಯಿಂದ ನಡೆದ ಬಾಗಳಿ ವಲಯ ಮಟ್ಟದ ಹಿರಿಯ ಪ್ರಾಥಮಿಕ ಶಾಲಾ ವಿಭಾಗದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದಷ್ಟೇ ಕ್ರೀಡೆಯೂ ಅಗತ್ಯವಾಗಿದೆ. ಕ್ರೀಡೆಗಳಲ್ಲಿ ಪಾಲ್ಗೊಳ್ಳುವದರಿಂದ ದೈಹಿಕ ಮತ್ತು ಮಾನಸಿಕವಾಗಿ ನಿಯಂತ್ರಣ ಕಾಪಾಡಿಕೊಳ್ಳಬಹುದು. ಮಕ್ಕಳು ಯಾವ ರಂಗದಲ್ಲಿ ಆಸಕ್ತಿಯನ್ನು ತೋರಿಸುತ್ತಾರೆ ಎನ್ನುವುದನ್ನು ಪೋಷಕರು ಸರಿಯಾಗಿ ಗಮನಿಸಿ, ಅವರ ಇಚ್ಛೆಗೆ ತಕ್ಕಂತೆ ಶಿಕ್ಷಣವನ್ನು ಕೊಡಿಸಬೇಕು ಎಂದರು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ನಾಗರಾಜ್ ಮಾತನಾಡಿ, ಆಟದಲ್ಲಿ ಸೋಲು–ಗೆಲುವುಗಳು ಸಹಜ. ಆದರೆ ಮಕ್ಕಳಲ್ಲಿ ಸ್ಪರ್ಧಾತ್ಮಕ ಗುಣವನ್ನು ಶಿಕ್ಷಕರು ಬೆಳೆಸಬೇಕು. ಟಿವಿ, ಮೊಬೈಲ್‌ಗಳ ಗೀಳು ಹೆಚ್ಚಾಗಿ ಮಕ್ಕಳಲ್ಲಿ ದೈಹಿಕ ಪರಿಶ್ರಮ ಇಲ್ಲದಂತಾಗಿದೆ. ಚಿಕ್ಕ ವಯಸ್ಸಿನಲ್ಲಿಯೇ ಹಲವಾರು ರೋಗಗಳಿಗೆ ತುತ್ತಾಗಿ ಸಾವನ್ನಪ್ಪುತ್ತಿರುವುದನ್ನು ನಾವು ಗಮನಿಸುತ್ತಿದ್ದೇವೆ. ಆದ್ದರಿಂದ, ಆರೋಗ್ಯತಯುತ ಜೀವನಕ್ಕಾಗಿ ಕ್ರೀಡೆಯು ಅಮೂಲ್ಯ ಎಂದರು.

ಟಿಪಿಇಓ ಕೆ.ಷಣ್ಮುಖಪ್ಪ ಮಾತನಾಡಿ, ಮಕ್ಕಳಲ್ಲಿ ಸ್ನೇಹ ಬೆಳೆಸಲು ಕ್ರೀಡೆಯು ಉತ್ತಮ ವೇದಿಕೆಯಾಗಿದೆ. ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸದ ವಾತವರಣ ಸೃಷ್ಟಿಯಾಗುತ್ತದೆ. ಕ್ರೀಡಾಳುಗಳು ತೀರ್ಪುಗಾರರ ತೀರ್ಪಿಗೆ ಬದ್ಧರಾಗಿರಬೇಕು ಎಂದರು.

ಈ ಸಂದರ್ಭದಲ್ಲಿ ಎ.ಡಿ. ನಾಗರಾಜ್, ಟಿಪಿಇಓ ಷಣ್ಮುಖಪ್ಪ, ಬಿಆರ್‌ಪಿ ಎಸ್. ನಾಗರಾಜ್, ಸಿಆರ್‌ಪಿ ಪ್ರಶಾಂತ, ಬಾಗಳಿ ಗ್ರಾ.ಪಂ ಅಧ್ಯಕ್ಷೆ ರೇಣುಕ, ವಲಯ ಸಂಚಾಲಕರಾದ ರೂಪಾದೇವಿ ಶೃಂಗಾರತೋಟದ, ಮುಖ್ಯ ಶಿಕ್ಷಕಿ ಸುಜಾತ, ಎಸ್ಡಿಎಂಸಿ ಅಧ್ಯಕ್ಷ ಹನುಮಜ್ಜ, ಶಿಕ್ಷಕರಾದ ಎ. ಅನಂತ, ಬಂದೋಳ್ ಸಿದ್ದೇಶ್, ರಾಜಕುಮಾರ್, ಎಂ. ರಮೇಶ್, ಜಯಪ್ರಕಾಶ್, ರಾಜಶೇಖರ್ ಬಿ, ಅಂಗಡಿ ಮಂಜುನಾಥ, ಅಣ್ಣಪ್ಪ, ಬಸವರಾಜ ಮುಂತಾದವರಿದ್ದರು.

# ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಡಾ. ಪಂಡಿತ ಪುಟ್ಟರಾಜ ಕವಿಗವಾಯಿಗಳರವರ 15ನೇ ಪುಣ್ಯಸ್ಮರಣೆಯ ಅಂಗವಾಗಿ ನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ.13ರ ವಿದ್ಯಾರ್ಥಿಗಳಿಗೆ ಶ್ರೀ ಪಂಡಿತ ಪುಟ್ಟರಾಜ ಸಮಾಜಸೇವಾ ಟ್ರಸ್ಟ್ ವತಿಯಿಂದ ಉಚಿತವಾಗಿ ನೋಟಬುಕ್ ಮತ್ತು ಪೆನ್ನುಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಅಧ್ಯಕ್ಷ ಸಿದ್ರಾಮಯ್ಯ ಕಟಗಿಹಳ್ಳಿಮಠ ಮಾತನಾಡಿ, ನಮ್ಮ ಟ್ರಸ್ಟ್‌ನ ವತಿಯಿಂದ ಶ್ರೀ ಡಾ. ಪಂಡಿತ ಪುಟ್ಟರಾಜ ಕವಿಗವಾಯಿಗಳವರ 15ನೇ ಪುಣ್ಯಸ್ಮರಣೆ ಅಂಗವಾಗಿ ಇದೊಂದು ಸಮಾಜಮುಖಿ ಕೆಲಸ ಮಾಡುತ್ತ ಪಂಡಿತ ಪುಟ್ಟರಾಜ ಗವಾಯಿಗಳ ಲಕ್ಷಾಂತರ ಬಡ ಅಂಧ ಅನಾಥ ಮಕ್ಕಳಿಗೆ ಆಶ್ರಯ ನೀಡಿ ಶಿಕ್ಷಣ, ಸಂಗೀತ ದಾಸೋಹ ನೀಡಿದ ಪೂಜ್ಯರ ಸ್ಮರಣೆಯ ಉದ್ದೇಶದಿಂದ ನಮ್ಮ ಟ್ರಸ್ಟ್ ಅಳಿಲು ಸೇವೆ ಸಲ್ಲಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಪದಾಧಿಕಾರಿಗಳಾದ ಬಸನಗೌಡ ಪಾಟೀಲ, ಗಂಗಾಧರ ಬೆಣಕಲ್ಲ, ಈಶಪ್ಪ ಅಂಗಡಿ, ಬಸವರಾಜ ಡಾವಣಗೇರಿ, ಮಹಾಂತೇಶ ಲಗಳಿ, ಮಂಜುನಾಥ ಖ್ಯಾಡದ, ಶರಣಪ್ಪ ಮೇಟಿ, ಭೀಮಪ್ಪ ಮೊಖಾಶಿ ಹಾಗೂ ಓಣಿಯ ಹಿರಿಯರಾದ ಶಿವಪ್ಪ ಲಗಳಿ, ಸುನೀಲ ಚಿನ್ನಾಪೂರ, ಪಟ್ಟದಕಲ್ಲ ಗುರುಗಳು, ಶಿವಯ್ಯ ಬೆಳ್ಳಿರಿಮಠ, ಈರಣ್ಣ ಸತ್ತಿಗೇರಿ ಹಾಗೂ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕಿಯರು, ಶಾಲೆಯ ಮಕ್ಕಳು ಉಪಸ್ಥಿತರಿದ್ದರು.

### 16ನೇ ದಿನದತ್ತ ಬಗರ್‌ಹುಕುಂ ರೈತರ ಅಹೋರಾತ್ರಿ ಧರಣಿ

# ರೈತರಿಂದ ಅರೆಬೆತ್ತಲೆ ಹೋರಾಟಕ್ಕೆ ನಿರ್ಧಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಬಗರ್‌ಹುಕುಂ ರೈತರ ಹೋರಾಟ 16ನೇ ದಿನವೂ ಮುಂದುವರೆದಿದ್ದು, ರೈತರ ಬೇಡಿಕೆಗಳನ್ನು ಈಡೇರಿಸದ ಸರ್ಕಾರದ ನೀತಿಯನ್ನು ಖಂಡಿಸಿ ಬುಧವಾರ 12 ಗಂಟೆಯಿಂದ ಜಿಲಾಧಿಕಾರಿಗಳ ಕಛೇರಿ ಎದುರು ಅರೆಬೆತ್ತಲೆ ಹೋರಾಟಕ್ಕೆ ಬಗರ್‌ಹುಕುಂ ರೈತರು ನಿರ್ಧರಿಸಿದ್ದಾರೆ.

ಹಂತಹಂತವಾಗಿ ರೈತರು ತಮ್ಮ ಹೋರಾಟದ ರೂಪುರೇಷೆಯನ್ನು ಬದಲಾಯಿಸುತ್ತಿದ್ದು, ದಯಾಮರಣಕ್ಕೆ ಇನ್ನೆರಡು ದಿನದಲ್ಲಿ ರೈತರು ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ನೀಡುವ ನಿರ್ಧಾರವನ್ನು ಮಾಡಿದ ಬೆನ್ನಲ್ಲೇ ಮಂಗಳವಾರ ರೈತರೆಲ್ಲ ಸೇರಿ ಜಿಲ್ಲಾಡಳಿತ ಭವನದೆದುರು ಅರೆಬೆತ್ತಲೆ ಹೋರಾಟವನ್ನು ಮಾಡಿ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಲು ತಿರ್ಮಾನಿಸಿದ್ದಾರೆ.




ಜಿಲ್ಲೆಯ ಬಗರ್‌ಹುಕುಂ ಮತ್ತು ಅರಣ್ಯ ಭೂಮಿ ಅವಲಂಬಿತ ರೈತರು ಹಾಗೂ ನಾಗಾವಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕಾಗಿ ತಮ್ಮ ಜಮೀನುಗಳನ್ನು ಕಳೆದುಕೊಂಡಿರುವುದರಿಂದ, ಸರ್ಕಾರದಿಂದ ಹಕ್ಕು ಪತ್ರ ಮತ್ತು ಪರಿಹಾರ ದೊರೆಯಬೇಕೆಂದು ಆಗಸ್ಟ್ 19ರಿಂದ ಹೋರಾಟ ನಡೆಯುತ್ತಿದ್ದು, ಈ ಹಿಂದೆ 2023ರಲ್ಲಿ ಇದೇ ರೀತಿಯ ಅಹೋರಾತ್ರಿ ಧರಣಿ ನಡೆದಾಗ ಸಚಿವ ಎಚ್.ಕೆ. ಪಾಟೀಲರು ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದ್ದರು. ಸಚಿವರು ಜಿಲ್ಲೆಯಲ್ಲಿ ಅನೇಕ ಕಾರ್ಯಕ್ರಮಗಳಿಗೆ ಹಾಜರಾಗಿ ಧರಣಿನಿರತ ಮಾರ್ಗದಲ್ಲಿ ಹೋದರೂ ಪ್ರತಿಭಟನಾಕಾರರನ್ನು ಭೇಟಿಯಾಗದೆ ಇರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

ಸ್ಫೂರ್ತಿ ಸ್ವಯಂ ಸೇವಾ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರೂಪಾ ನಾಯ್ಕ ಮಾತನಾಡಿ, ಸುಮಾರೂ 25 ವರ್ಷಗಳಿಂದ ನಮ್ಮ ಸಂಸ್ಥೆ ಅರಣ್ಯ ಭೂಮಿ ಹಕ್ಕುಪತ್ರಕ್ಕಾಗಿ ಹೋರಾಟ ಮಾಡಿ ದಾವಣಗೆರೆ ಜಿಲ್ಲೆಯಲ್ಲಿ ಅನೇಕ ರೈತರಿಗೆ ಹಕ್ಕು ಪತ್ರಗಳನ್ನು ಒದಗಿಸಿಕೊಟ್ಟಿದ್ದೇವೆ. ಧರಣಿ ನಿರತರ ಬೇಡಿಕೆಗಳು ನ್ಯಾಯಯುತವಾಗಿದ್ದು, ಜಿಲ್ಲಾಡಳಿತ ರೈತರ ಬೇಡಿಕೆಗಳನ್ನು ಇಡೇರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಸತತ 15 ದಿನಗಳಿಂದ ಈ ಹೋರಾಟ ನಡೆಯುತ್ತಿದ್ದರೂ ಸಚಿವರು ರೈತರ ಅಹವಾಲು ಆಲಿಸಿಲ್ಲ. ಜಿಲ್ಲಾಡಳಿತ ಮತ್ತು ಉಸ್ತುವಾರಿ ಸಚಿವರು ಕೂಡಲೇ ರೈತರ ಬೇಡಿಕೆಗಳಿಗೆ ಸ್ಪಂದಿಸುವ ವಿಶ್ವಾಸವಿದೆ ಎಂದು ಹೇಳಿದರು.

ಪ್ರತಿಭಟನಾ ಸ್ಥಳದಲ್ಲಿ ತಾ.ಪಂ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ, ಎನ್.ಟಿ. ಪೂಜಾರ, ಚಿಂಬಣ್ಣ ಚನ್ನಪಟ್ಟಣ, ನಾಮದೇವ, ನಿಂಗಪ್ಪ, ಚನ್ನಪ್ಪ ಭಗತ್, ಫಿರೋಜ್ ನದಾಫ್, ಎಮ್. ಶಲವಡಿ ಸೇರಿದಂತೆ ಜಿಲ್ಲೆಯ ಅನೇಕ ರೈತರು, ಮಹಿಳೆಯರು ಹಾಗೂ ಹೋರಾಟಗಾರರು ಉಪಸ್ಥಿತರಿದ್ದರು.

> ಜಿಲ್ಲಾ ಉಸ್ತುವಾರಿ ಸಚಿವರು ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು. ಸತತ 15 ದಿನಗಳಿಂದ ಈ ಹೋರಾಟ ನಡೆಯುತ್ತಿದ್ದು, ಜಿಲ್ಲಾ ಉಸ್ತುವಾರಿ ಸಚಿವರ ರೈತ ವಿರೋಧಿ ಧೋರಣೆ ಖಂಡನೀಯ. ನ್ಯಾಯಸಮ್ಮತ ಬೇಡಿಕೆಗಳಿಗೆ ಜಿಲ್ಲಾಡಳಿತ ತಕ್ಷಣ ಸ್ಪಂದಿಸಬೇಕು. ನಮ್ಮ ಹೋರಾಟ ತೀವ್ರ ಸ್ವರೂಪ ಪಡೆಯುವ ಮುನ್ನ ಜಿಲ್ಲಾಡಳಿತ ಎಚ್ಚೆತ್ತುಕೊಳ್ಳಬೇಕು.
> – **ರವಿಕಾಂತ ಅಂಗಡಿ.**
> ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷರು.

# ಹಳ್ಳಕ್ಕೆ ಉರುಳಿದ ಖಾಸಗಿ ಬಸ್

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಚಾಲಕನ ನಿಯಂತ್ರಣ ತಪ್ಪಿ ಖಾಸಗಿ ಬಸ್ಸೊಂದು ಸೇತುವೆ ಮೇಲಿಂದ ಹಳ್ಳಕ್ಕೆ ಪಲ್ಟಿಯಾಗಿ 24ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿರುವ ಘಟನೆ ತಾಲೂಕಿನ ಅಣಜಿಗೆರೆ ಗ್ರಾಮದ ಬಳಿ ಮಂಗಳವಾರ ಮಧ್ಯಾಹ್ನ ನಡೆದಿದೆ.

ದಾವಣಗೆರೆಯಿಂದ ಉಚ್ಚಂಗಿದುರ್ಗ, ಮಾದಿಹಳ್ಳಿ ಮಾರ್ಗವಾಗಿ

28 ಜನ ಪ್ರಯಾಣಿಕರನ್ನು ತುಂಬಿಕೊಂಡು ಹರಪನಹಳ್ಳಿ ಕಡೆ ಹೊರಟ್ಟಿದ್ದ ಬನಶಂಕರಿ ಖಾಸಗಿ ಬಸ್ ಅಣಜಿಗೆರೆ ಬಳಿಯಿರುವ ಸೇತುವೆಯ ಬಳಿ ಪಲ್ಟಿಯಾಗಿದೆ. ಗಾಯಾಳುಗಳನ್ನು ಅರಸೀಕೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಂಭೀರವಾಗಿ ಗಾಯಗೊಂಡ 4 ಜನ ಪ್ರಯಾಣಿಕರನ್ನು ದಾವಣಗೆರೆ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.



ಅಣಜಿಗೆರೆ ಬಳಿಯಿರುವ ಸೇತುವೆಗೆ ತಡೆಗೋಡೆ ಇಲ್ಲದ ಪರಿಣಾಮ ಈ ಘಟನೆ ಸಂಭವಿಸಿದೆ. ಮಳೆಗಾಲದಲ್ಲಿ ಹಳ್ಳಕ್ಕೆ ಹೆಚ್ಚಿನ ನೀರು ಹರಿದು ಬರುತ್ತಿದ್ದು, ಸೇತುವೆ ಕೆಳಗಡೆ ಸಣ್ಣ ಪ್ರಮಾಣದ ಪೈಪ್ ಅಳವಡಿಸಿದ್ದರಿಂದ ಸೇತುವೆ ಮೇಲೆ ನೀರು ಹರಿದು ಪಾಚಿಗಟ್ಟಿದೆ. ಇದರಿಂದ ಇಂತಹ ಅನಾಹುತಗಳು ನಡೆಯುತ್ತವೆ ಎಂದು ಅಣಜಿಗೆರೆಯ ತರಿಹಳ್ಳಿ ಮಂಜುನಾಥ ಹೇಳಿದರು.

ಸ್ಥಳಕ್ಕೆ ಅರಸೀಕರೆ ಪೊಲೀಸ್ ಠಾಣೆಯ ಪಿಎಸ್‌ಐ ವಿಜಯಕೃಷ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮುಕ್ತಿಧಾಮ ಅಭಿವೃದ್ಧಿಗೆ ಅನುದಾನ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಗಸ್ತ್ಯತೀರ್ಥದ ಬಳಿ ಇರುವ ಮುಕ್ತಿಧಾಮದಲ್ಲಿ ಅವಶ್ಯವಿರುವ ಮೂಲಭೂತ ಸೌಲಭ್ಯಗಳು ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾರ್ಯಗಳಿಗೆ ಪುರಸಭೆಯಿಂದ ಅನುದಾನ ಒದಗಿಸುವಂತೆ ಲಕ್ಷ್ಮೇಶ್ವರ ಮುಕ್ತಿಧಾಮ ಸಂಘದವರು ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿದ ಸಂಘದ ಅಧ್ಯಕ್ಷ ವಿ.ಎಲ್. ಪೂಜಾರ, ಹಲವು ವರ್ಷಗಳಿಂದ ಅಗಸ್ತ್ಯ ತೀರ್ಥದ ಬಳಿ ಮುಕ್ತಿಧಾಮವಿದ್ದು, ಇದರಲ್ಲಿ ಸುಮಾರು 18–20 ಸಮಾಜದವರು ಅಂತ್ಯಕ್ರಿಯೆ ನೆರವೇರಿಸುತ್ತಾರೆ. ಆದರೆ ಅದಕ್ಕೆ ತಕ್ಕಂತೆ ಈ ಸ್ಮಶಾನದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಿಲ್ಲ. ಅಂತ್ಯಸಂಸ್ಕಾರಕ್ಕಾಗಿ ಸಿಲಿಕಾನ್ ಚೇಂಬರ್, ಬಂದ ಜನರಿಗೆ ಕುಳಿತುಕೊಳ್ಳಲು ಆಸನಗಳು, ಅಲ್ಲದೆ ಮೂಲಭೂತ ಸೌಲಭ್ಯಗಳಾದ ವಿದ್ಯುತ್, ನೀರು ಇತ್ಯಾದಿಗಳ ಸಮಸ್ಯೆಗಳಿಂದ ಅಲ್ಲಿಗೆ ಬರುವ ಜನರು ತೊಂದರೆ ಅನುಭವಿಸುತ್ತಿದ್ದಾರೆ. ಸ್ಮಶಾನ ಅಭಿವೃದ್ಧಿಗಾಗಿ ಅನುದಾನವನ್ನು ನೀಡಬೇಕೆಂದು ವಿನಂತಿಸಿದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಈ ಕುರಿತಂತೆ ಆಡಳಿತ ಮಂಡಳಿಯವರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಪುರಸಭೆ ಸದಸ್ಯರಾದ ರಾಜಣ್ಣ ಕುಂಬಿ, ಬಸವರಾಜ ಓದುನವರ, ರಾಮಪ್ಪ ಗಡದವರ, ರಾಮರಾವ ವೆರ್ಣೆಕರ, ಗಿರೀಶ ಅಗಡಿ, ಕಿರಣ ನವಲೆ, ವೈಭವ ಗೋಗಿ, ವೆಂಕಟೇಶ ಮಾತಾಡೆ, ಪ್ರವೀಣ ಬೋಮಲೆ, ಅಭಯ ಜೈನ್, ಬಾಸ್ಕರ್ ಸೊರಟೂರ, ಆದೇಶ ಬರಿಗಾಲಿ, ಮಹೇಶ ಹುಲಬಜಾರ, ಶಂಕರ ಹಾವಳೆ, ಪ್ರಭಾಕರ ಬೋಮಲೆ ಸೇರಿದಂತೆ ಅನೇಕರಿದ್ದರು.

# ಸಂಗೀತ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ ಮೈಸೂರು ಇವರು ನಡೆಸುವ ಹಿಂದೂಸ್ಥಾನಿ ಸಂಗೀತ ಹಾಗೂ ತಾಳವಾದ್ಯ ಪರೀಕ್ಷೆಯಲ್ಲಿ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪ. ಪಂಚಾಕ್ಷರಿ ಗವಾಯಿಗಳವವರ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ.

ಜೂನಿಯರ್ ಗಾಯನ: ಶೋಧನ್ ಶೆಟ್ಟಿ, ಸುಧಾಕರ ಶೆಟ್ಟಿ 346 (ಶೇ.86.50) ಪ್ರಥಮ, ವಿಠ್ಠಲ ಜಿ., ಕುಬೇರ ಜಿ. 342 (ಶೇ.85.50) ದ್ವಿತೀಯ, ಮನೋಜಕುಮಾರ ಬಿ.ಸಿ 339 (ಶೇ.84.75) ತೃತೀಯ ಸಿನೀಯರ್ ಗಾಯನ: ಕವನಾ ಈರಣ್ಣಾ ಕೊಣ್ಣೂರ 413 (ಶೇ.82.60) ಪ್ರಥಮ, ಪ್ರಕಾಶ ನಾಗಣ್ಣಾ 385 (ಶೇ.77.00) ದ್ವಿತೀಯ, ಪುಟ್ಟರಾಜ ಕೆ.ವೆಂಕಟಾಪುರಮಠ 377 (ಶೇ.75.40) ತೃತೀಯ.

**ವಿದ್ವತ್ ಪೂರ್ವ ಗಾಯನ:** ರಾಮು ಎಸ್.ಸುಡುಗಾಡಸಿದ್ಧ 448 (ಶೇ.74.66), ಹೇಮಂತ ಎಸ್.ವಿ ಹಡಪದ 322 (ಶೇ.80.50) ದ್ವಿತೀಯ, ಮಲ್ಲಿಕಾರ್ಜುನ ಕುಚನೂರ 309(ಶೇ.77.25) ತೃತೀಯ. **ಸೀನಿಯರ್ ತಾಳವಾದ್ಯ:** ಏಕಾಂಬ್ರೇಶ ಬಿ.ಹಳ್ಳಿಕೇರಿ 325 (ಶೇ.65) ಪ್ರಥಮ. ಜೂನಿಯರ್ ವಾಯೋಲಿನ್–ಗುರುಕುಮಾರ ಆರ್.ಹಿರೇಮಠ 357 (ಶೇ.87.25) ಪ್ರಥಮ, ಸವಿತಾ ಎನ್.ಬಾಹೇಟಿ 343 (ಶೇ.85.75), ಪಲ್ಲವಿ ಎಸ್. ಗುಜಮಾಗಡಿ 323 (ಶೇ.80.75) ತೃತೀಯ.

**ಜೂನಿಯರ್ ಹಾರ್ಮೋನಿಯಂ:** ನಿಖಿತಾ ಎಸ್.ಹೆಬಸೂರ 380.95 (ಪ್ರಥಮ) ನಂದೀಶ ಎಂ.ಕೆ. 342 (ಶೇ.85) ದ್ವಿತೀಯ ಸ್ಥಾನ ಪಡೆದಿದ್ದಾರೆ.

ಡಾ. ಪಿ.ಜಿ.ಎ.ಎಸ್ ಸಮಿತಿಯ ಕಾರ್ಯಾಧ್ಯಕ್ಷರು/ಕಾರ್ಯದರ್ಶಿಗಳು, ಸದಸ್ಯರು ಆಡಳಿತಾಧಿಕಾರಿಗಳು, ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ಶಾಲೆಯ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

### 25ನೇ ವರ್ಷದ ಗಣೇಶೋತ್ಸವದ ನಿಮಿತ್ತ ನಿವೃತ್ತರಿಗೆ ಸನ್ಮಾನ

# ಯುವಕ ಮಂಡಳದ ಕಾರ್ಯ ಶ್ಲಾಘನೀಯ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸದಾ ಸಮಾಜಮುಖಿ ಕಾರ್ಯಗಳೊಂದಿಗೆ ಕಳೆದ 25 ವರ್ಷಗಳಿಂದ ವಿಘ್ನ ನಿವಾರಕ ಗಣೇಶನನ್ನು ಶ್ರದ್ಧಾ ಭಕ್ತಿಯಿಂದ ಪ್ರತಿಷ್ಠಾಪಿಸಿ ಪೂಜಿಸುತ್ತ ಬಂದಿರುವ ಕೋಟೆ ವೀರಭದ್ರೇಶ್ವರ ಯುವಕ ಮಂಡಳದ ಕಾರ್ಯ ಶ್ಲಾಘನೀಯ ಎಂದು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಶ್ರೀಗಳು ಹೇಳಿದರು. ಇಲ್ಲಿಯ ಕೋಟೆ ವೀರಭದ್ರೇಶ್ವರ ಯುವಕ ಮಂಡಳವು ಗಣೇಶೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸೇವಾ ನಿವೃತ್ತಿಯಾಗಿರುವ ಸಂಘದ ಸದಸ್ಯರ ಸನ್ಮಾನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಈ ಸಂಘವು ಜಿಲ್ಲಾ, ರಾಜ್ಯ ಮಟ್ಟದ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಿ ಆಟಗಾರರಿಗೆ ಪ್ರೋತ್ಸಾಹ ನೀಡಿದೆ. ವಿಶೇಷವಾಗಿ ಕಬಡ್ಡಿ ಆಟದಲ್ಲಿ ಮುಂಚೂಣಿಯಲ್ಲಿದ್ದು, ಸಂಘದ ಸದಸ್ಯರು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಆಡಿ ಯಶಸ್ವಿಯಾಗಿದ್ದಾರೆ. ಕೇವಲ ಆಟದಲ್ಲಿಯೇ ತೊಡಗಿಕೊಳ್ಳದೇ ಸ ವ ಾ ಜ ವ ಾ ಖ ಿಂ ಾಗಿ ಉಚಿತ ಸಾಮೂಹಿಕ ವಿವಾಹ ಮಾಡುವದರೊಂದಿಗೆ ಜಾತ್ರೆ, ಉತ್ಸವಗಳಲ್ಲಿ ಭಾಗಿಯಾಗಿ ಈ ಗ್ರಾಮದಲ್ಲಿ ಮಾದರಿ ಯುವಕ ಮಂಡಳವಾಗಿ ಹೊರಹೊಮ್ಮಿದೆ ಎಂದರು.

ನಿವೃತ್ತ ದೈಹಿಕ ಶಿಕ್ಷಕ ಎಸ್.ಸಿ. ಭಾವಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಸಂಘವು ಬೆಳೆದುಬಂದ ದಾರಿಯನ್ನು ವಿವರಿಸಿ, ಹಲವಾರು ರಾಜ್ಯ ಮಟ್ಟದ ಕ್ರೀಡಾಕೂಟವನ್ನು ಏರ್ಪಡಿಸಿ ಗದಗ ಜಿಲ್ಲೆಯಲ್ಲಿ ಹೆಸರು ಗಳಿಸಿದೆ. ಸಂಘವು ರಾಷ್ಟ್ರ ಮಟ್ಟದ ಕಬಡ್ಡಿ ಕ್ರೀಡಾಕೂಟವನ್ನು ಏರ್ಪಡಿಸುವ ಕನಸನ್ನು ಹೊಂದಿದ್ದು, ಕ್ರೀಡಾಭಿಮಾನಿಗಳ, ಗಣ್ಯರ ಪ್ರೋತ್ಸಾಹ ಅಗತ್ಯವಾಗಿದೆ ಎಂದರು.

ನಿವೃತ್ತ ಶಿಕ್ಷಕ ಮಲ್ಲಿಕಾರ್ಜುನ ಬೇವಿನಮಟ್ಟಿ ಮಾತನಾಡಿದರು. ಅಲ್ಲಮಪ್ರಭುದೇವರ ಮಠದ ಸಿದ್ದಲಿಂಗೇಶ್ವರ ಶ್ರೀಗಳು, ಶಿವಮೂರ್ತೆಯ್ಯ ಮುಳಗುಂದಮಠ, ನಿವೃತ್ತ ಶಿಕ್ಷಕ ವಿ.ಐ. ಬಡಿಗೇರ, ಸಂಘದ ಅಧ್ಯಕ್ಷ ಹಾಲಪ್ಪ ಹಳ್ಳಿ ವೇದಿಕೆಯಲ್ಲಿದ್ದರು. ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಸ್ವಾಗತಿಸಿದರು. ಪ್ರಕಾಶ ಅರಹುಣಶಿ ನಿರೂಪಿಸಿದರು. ಬಸವರಾಜ ಬೂಮಣ್ಣವರ ವಂದಿಸಿದರು.

> ನಿವೃತ್ತ ಎಎಸ್‌ಐ ಯಲ್ಲಪ್ಪ ಕದಂ ಮಾತನಾಡಿ, ಈ ಯುವಕ ಮಂಡಳದ ಸದಸ್ಯನಾಗಿ ಕಬಡ್ಡಿ ಕ್ರೀಡಾಪಟುವಾಗಿ ಹೊರಹೊಮ್ಮಿದ್ದೆ. ಇಲ್ಲಿಯ ಕಾರ್ಯ ಚಟುವಟಿಕೆಯಿಂದಲೇ ನಾನು ಪೊಲೀಸ್ ಇಲಾಖೆಯಲ್ಲಿ ಸೇರುವಂತಾಯಿತು. ಆದ್ದರಿಂದ ಇಂದಿನ ಯುವ ಪೀಳಿಗೆ ದುಶ್ಚಟದಿಂದ ದೂರವಿದ್ದು ಸಾಮಾಜಿಕ ಸೇವೆಯಲ್ಲಿ ತೊಡಗಿಕೊಳ್ಳಬೇಕು. ಪ್ರತಿಯೊಬ್ಬ ಯುವಕರು ತಮ್ಮ ಆರೋಗ್ಯವನ್ನು ರಕ್ಷಿಸಿಕೊಳ್ಳಲು ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

### ಆಶ್ರಯ ಕಾಲೋನಿ ಗಣಪತಿ ಉತ್ಸವಕ್ಕೆ ಗದಗ ಎಸ್‌ಪಿ ರೋಹನ್ ಜಗದೀಶ್ ಭೇಟಿ

# ನಿತ್ಯ ಜೀವನದಲ್ಲಿ ಸಹಬಾಳ್ವೆಯಿರಲಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಎಲ್ಲಿ ಜಾತಿ, ಧರ್ಮ ಎಂಬುದನ್ನು ಮರೆತು ಜನರು ಒಗ್ಗಟ್ಟಾಗಿ ಬಾಳುತ್ತಾರೋ ಅಲ್ಲಿ ಖುಷಿಯ ವಾತಾವರಣ ನಿರ್ಮಾಣವಾಗಿರುತ್ತದೆ. ಅದಕ್ಕೆ ಇಲ್ಲಿನ ಜನರ ಜೀವನವೇ ಸಾಕ್ಷಿ. ಆದ್ದರಿಂದ ನಿತ್ಯ ಜೀವನದಲ್ಲಿ ಸಹಬಾಳ್ವೆ, ಸೌಹಾರ್ದತೆಯನ್ನು ಅಳವಡಿಸಿಕೊಳ್ಳಬೇಕು. ಆಗ ಎಂತಹುದೇ ಸಮಸ್ಯೆ ಬಂದರೂ ತಾವಾಗಿಯೇ ದೂರವಾಗುತ್ತವೆ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಹೇಳಿದರು.

ನರೇಗಲ್ ಪಟ್ಟಣದ 3ನೇ ವಾರ್ಡ್‌ನ ಜಕ್ಕಲಿ ರೋಡ್ ಆಶ್ರಯ ಕಾಲೋನಿಯಲ್ಲಿ ಹಿಂದೂ–ಮುಸ್ಲಿಂ ಸಮುದಾಯದವರು ಕೂಡಿ ಪ್ರತಿಷ್ಠಾಪಿಸುವ 'ಭಾವೈಕ್ಯ ಗಣೇಶೋತ್ಸವಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಧರ್ಮ, ನಂಬಿಕೆ, ಕರುಣೆ ಎಂಬುದರ ಕೊರತೆಯಿಂದ ಜನರು ಸಂಬಂಧಗಳನ್ನು ದೂರವಾಡಿಕೊಳ್ಳುತ್ತಿದ್ದಾರೆ. ಅಂತಹದರಲ್ಲಿ ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತರು ಹಾಗೂ ಇತರರೆಲ್ಲೂರು ಅನ್ಯೋನ್ಯವಾಗಿ ಬದುಕುತ್ತಿರುವುದನ್ನು ನೋಡಿ ಸಂತೋಷವಾಗಿದೆ. ಕೂಲಿಕಾರ್ಮಿಕರು, ಬಡವರು, ರೈತರು ಹಾಗೂ ಶ್ರಮಿಕ ವರ್ಗದ ಜನರೇ ಹೆಚ್ಚಾಗಿರುವ ನಿಮ್ಮ ಓಣಿಯಲ್ಲಿ ಅಚ್ಚುಕಟ್ಟಾಗಿ, ಉತ್ತಮ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಶ್ಲಾಘನೀಯವಾಗಿದೆ.

ಪತ್ರಿಕೆಗಳಲ್ಲಿ ಇಲ್ಲಿನ ಗಣಪತಿ ಪ್ರತಿಷ್ಠಾಪನೆ ಹಾಗೂ ವಿಶೇಷ ಆಚರಣೆ ಬಗ್ಗೆ ಓದಿದ ಬಳಿಕ ಆಸಕ್ತಿ ಮೂಡಿತು. ಅದಕ್ಕಾಗಿ ನಾನೇ ಖುದ್ದು ವೀಕ್ಷಣೆಗೆ ಬಂದಿರುವೆ. ಈ ಓಣಿಯ ಸಂಸ್ಕೃತಿ ಎಲ್ಲರಿಗೂ ಮಾದರಿಯಾಗಿದೆ ಇದನ್ನು ಹೀಗೆ ಮುಂದುವರೆಸಿಕೊಂಡು ಹೋಗಬೇಕು. ಜನರು ಪ್ರೀತಿಯಿಂದ ಸ್ವಾಗತಿಸಿ ಗೌರವಿಸಿದ್ದಕ್ಕೆ ಬಹಳ ಸಂತೋಷವಾಗಿದೆ. ಮಕ್ಕಳಿಗೆ ಉತ್ತಮ ಸಂಸ್ಕಾರ, ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಉತ್ತಮ ಪ್ರಜೆಗಳನ್ನಾಗಿಸಬೇಕು ಎಂದರು.

ಶಾಲಾ ಕಾಲೇಜು ವಿದ್ಯಾರ್ಥಿನಿಯರನ್ನು ಕರೆದು ಅವರ ಓದು, ಸಾಧನೆಗಳ ಬಗ್ಗೆ ಕೇಳಿದರಲ್ಲದೆ, ಇದೇ ಓಣಿಯಿಂದ ಮಹಿಳಾ ಪಿಎಸ್‌ಐ, ಎಸ್‌ಪಿಗಳು ಆಗಲಿ ಎಂದು ಪ್ರೋತ್ಸಾಹಿಸಿದರು.

ಈ ವೇಳೆ ನರಗುಂದ ಡಿವೈಎಸ್‌ಪಿ ಪ್ರಭುಗೌಡ ಕಿರೇದಹಳ್ಳಿ, ರೋಣ ಸಿಪಿಐ ಎಸ್.ಎಸ್. ಬೀಳಗಿ, ನರೇಗಲ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ, ಓಣಿಯ ನಿವಾಸಿಗಳಾದ ದಾದುಸಾಬ ನದಾಫ್, ಶರಣಪ್ಪ ಹಂಚಿನಾಳ, ಸದ್ದಾಂ ನಶೇಖಾನ್, ಹಸನಪ್ಪ ಕೊಪ್ಪಳ, ಪರಸಪ್ಪ ರಾಠೋಡ, ವೀರೇಶ ಪಮ್ಮಾರ, ವಿರೂಪಾಕ್ಷಯ್ಯ ಹಿರೇಮಠ, ಚನ್ನವೀರಯ್ಯ ಹಿರೇಮಠ, ಶರಣಪ್ಪ ಕೊಂಡಿ, ಹನಮಂತಪ್ಪ ಜೋಡಗಂಬಳಿ, ನಿಂಗಯ್ಯ ಸಿದ್ದನಗೌಡ್ರ, ರಾಚಯ್ಯ ಹಿರೇಮಠ ಇದ್ದರು.

> ಬಡವರಿಗಾಗಿ ಹಂಚಿಕೆ ಮಾಡಲಾದ ಆಶ್ರಯ ಕಾಲೋನಿಯ ಓಣಿಗೆ ನಾಲ್ಕು ದಶಕಗಳ ನಂತರ ಎಸ್‌ಪಿ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳ ತಂಡ ಇದೇ ಮೊದಲ ಬಾರಿಗೆ ಆಗಮಿಸಿರುವುದಕ್ಕೆ ನಿವಾಸಿಗಳು ಖುಷಿಯಿಂದ ಆರತಿ ಮಾಡುವ ಮೂಲಕ ಸ್ವಾತಿಸಿದರು. ನಂತರ ಪೊಲೀಸ್ ಇಲಾಖೆಯವರು ಗಣಪತಿ ಪೂಜೆಯಲ್ಲಿ ಪಾಲ್ಗೊಂಡರು. ಇದೇ ವೇಳೆ ಎಸ್‌ಪಿ ರೋಹನ್ ಜಗದೀಶ್ ಅವರು ಮಕ್ಕಳನ್ನು ಎತ್ತಿಕೊಂಡು ಮುದ್ದಾಡುವುದು, ಶಾಲಾ ಮಕ್ಕಳನ್ನು ಮಾತನಾಡಿಸುವುದು, ಅವರಿಗೆ ಮುಂದೇನು ಆಗುತ್ತೀಯಾ ಎಂದು ಪ್ರಶ್ನೆ ಕೇಳಿ ಪ್ರೋತ್ಸಾಹಿಸಿದ್ದನ್ನು ನೋಡಿದ ಜನರು ಚಪ್ಪಾಳೆ ತಟ್ಟಿದರು.

# ಬಿಎಲ್‌ಓ ಕೆಲಸದಿಂದ ಶಿಕ್ಷಕರನ್ನು ಕೈಬಿಡಿ



■ ವಿಜಯಸಾಕ್ಷಿ ಸುದ್ದಿ, ರೋಣ

ಪ್ರಾಥಮಿಕ ಶಾಲಾ ಶಿಕ್ಷಕರಿಗೆ ವಹಿಸಿರುವ ಬಿಎಲ್‌ಓ ಕೆಲಸದಿಂದ ಶಿಕ್ಷಕರನ್ನು ಕೈಬಿಡಬೇಕು. ಬಿಎಲ್‌ಓ ಕೆಲಸ ನಿರ್ವಹಿಸುವುದರಿಂದ ಬೋಧನಾ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ ಎಂದು ರೋಣ ತಾಲೂಕಾ ಶಿಕ್ಷಕರ ಸಂಘದ ವತಿಯಿಂದ ಬಿಇಓ ಅರ್ಜುನ ಕಾಂಬೋಗಿಯವರಿಗೆ ಮಂಗಳವಾರ ಮನವಿ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ವಾಯ್.ಡಿ. ಗಾಣಿಗೇರ ಮಾತನಾಡಿ, ಬಿಎಲ್‌ಓ ಕೆಲಸದಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಹಿನ್ನಡೆಯಾಗುತ್ತಿದೆ. ಅಲ್ಲದೆ ಬಿಎಲ್‌ಓ ಕೆಲಸಕ್ಕೆ ನಿಯೋಜನೆಗೊಂಡ ಶಿಕ್ಷಕರು ಶಾಲೆಗೆ ಬಂದು ಮಕ್ಕಳಿಗೆ ಶಿಕ್ಷಣ ನೀಡಲು ಸಾಧ್ಯವೇ ಎಂದು ಪ್ರಶ್ನಿಸಿದರಲ್ಲದೆ, ಶಿಕ್ಷಕರಿಗೂ ಸಹ ಅನೇಕ ಕೆಲಸಗಳ ಒತ್ತಡಗಳಿವೆ. ಹೀಗಾಗಿ, ಮಕ್ಕಳಿಗೆ ಗುಣಮಟ್ಟದ ಅಕ್ಷರ ಜ್ಞಾನ ಒದಗಿಸುವ ನಿಟ್ಟಿನಲ್ಲಿ ಶಿಕ್ಷಕರನ್ನು ಬಿಎಲ್‌ಓ ಕೆಲಸದಿಂದ ಕೈಬಿಡಬೇಕು ಎಂದು ಆಗ್ರಹಿಸಿದರು.

ಪ್ರಧಾನ ಕಾರ್ಯದರ್ಶಿ ಸಿ.ಕೆ. ಕೇಸರಿ ಮಾತನಾಡಿ, ಬಿಎಲ್‌ಓ ಕೆಲಸಕ್ಕೆ ಶಿಕ್ಷಕರನ್ನು ನೇಮಕ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಅನೇಕ ತೊಂದರೆಗಳು ಉಂಟಾಗುತ್ತಿವೆ.

ಶಿಕ್ಷಕರು ಸಹ ಶಾಲೆಯಲ್ಲಿ ತಮ್ಮ ದೈನಂದಿನ ಚಟುವಟಿಕೆ ಕುರಿತು ಮಾಹಿತಿ ಕೊಡಬೇಕು. ಹೀಗಿರುವಾಗ, ಬಿಎಲ್‌ಓ ಕೆಲಸದಿಂದ ಶಿಕ್ಷಕರಿಗೆ ಮತ್ತಷ್ಟು ತೊಂದರೆಯಾಗುತ್ತಿದ್ದು, ಇದನ್ನು ಗಮನಿಸಿ ಶಿಕ್ಷಕರನ್ನು ಬಿಎಲ್‌ಓ ಕೆಲಸದಿಂದ ಬಿಡುಗಡೆಗೊಳಿಸಬೇಕು ಎಂದರು.

ತಾಲೂಕಾ ನೌಕರ ಸಂಘದ ಅಧ್ಯಕ್ಷ ಎಸ್.ಬಿ. ದಾನಪ್ಪಗೌಡ್ರ, ಎಂ.ವಾಯ್. ಜಕ್ಕರಸಾನಿ, ಬಿ.ಎಸ್. ಹಿರೇಮಠ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀ ಗಜಾನನ ಯುವಕ ಮಂಡಳದಿಂದ ಅನ್ನಸಂತರ್ಪಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಾರ್ಡ್ ನಂ. 25ರಲ್ಲಿ ಹಾಳದಿಬ್ಬ ಓಣಿಯ ಶ್ರೀ ಗಜಾನನ ಯುವಕ ಮಂಡಳದ ವತಿಯಿಂದ ಮಂಗಳವಾರ ಮಹಾಅನ್ನಸಂತರ್ಪಣೆ ಕಾರ್ಯಕ್ರಮ ಜರುಗಿತು. ಕಳೆದ 32 ವರ್ಷಗಳಿಂದ ಗಜಾನನೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ ಸಾಂಸ್ಕೃತಿಕ ಹಾಗೂ ಸ್ಪರ್ಧಾತ್ಮಕ ಚಟುವಟಿಕೆಗಳ ಕಾರ್ಯಕ್ರಮಗಳು ಜರುಗಿದವು. ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ವಿನಾಯಕ ಮಾನ್ವಿ ದಂಪತಿಗಳು ಡಾ. ಪಂಡಿತ ಪುಟ್ಟರಾಜ ಕವಿಗವಾಯಿಗಳರವರ 15ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಡಾ. ಪಂಡಿತ ಪುಟ್ಟರಾಜ ಗವಾಯಿಗಳವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನಸಂತರ್ಪಣೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿನಾಯಕ ಮಾನ್ವಿ, ಡಾ. ಪಂಡಿತ ಪುಟ್ಟರಾಜ ಗವಾಯಿಗಳವರು ಲಕ್ಷಾಂತರ ಅಂಧ, ಅನಾಥ ಮಕ್ಕಳಿಗೆ ಆಶ್ರಯ ನೀಡಿ ಸಂಗೀತ ಮತ್ತು ಶೈಕ್ಷಣಿಕ ದಾಸೋಹದ ಮೂಲಕ ನಡೆದಾಡುವ ದೇವರು ಎಂದು ಪ್ರಖ್ಯಾತರಾಗಿದ್ದಾರೆ. ಅವರ ಸ್ಮರಣೆಯೊಂದಿಗೆ ಈ ಮಹಾಅನ್ನಸಂತರ್ಪಣೆ ಪ್ರತಿ ವರ್ಷ ಜರುಗುವುದು ಎಂದು ನುಡಿದರು. ಓಣಿಯ ಹಿರಿಯರು, ಯುವಕರು, ಮಹಿಳೆಯರು, ಮಕ್ಕಳು ಪ್ರಸಾದ ಸ್ವೀಕರಿಸಿ ಶ್ರೀ ಗಣೇಶ ಮತ್ತು ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಕೃಪೆಗೆ ಪಾತ್ರರಾದರು.

### ಪ್ರಾಥಮಿಕ, ಪ್ರೌಢಶಾಲೆಗಳ ತಾಲೂಕು ಮಟ್ಟದ ಕ್ರೀಡಾಕೂಟ ಉದ್ಘಾಟಿಸಿದ ಆರ್.ಎಸ್. ಬುರಡಿ ಕರೆ

# ಉತ್ತಮ ಕ್ರೀಡಾಪಟುಗಳಾಗಿ ದೇಶದ ಕೀರ್ತಿ ಹೆಚ್ಚಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರದ ಎಲ್ಲಾ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಪಡೆದು, ಉತ್ತಮ ಕ್ರೀಡಾಪಟುಗಳಾಗಿ ದೇಶದ ಕೀರ್ತಿ ಹೆಚ್ಚಿಸಬೇಕೆಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹೇಳಿದರು.

ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಗದಗ, ಶಾಲಾ ಶಿಕ್ಷಣ ಇಲಾಖೆ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಹರ ವಲಯ ಗದಗ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಗದಗ ಶಹರ ವಲಯ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ನಗರದ ದಿ. ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 2025-26ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ತಾಲೂಕು ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ, ಕ್ರೀಡಾಜ್ಯೋತಿ ಸ್ವೀಕರಿಸಿ ಅವರು ಮಾತನಾಡಿದರು.



ಗದಗ ಡಯಟ್‌ನ ಪ್ರಾಚಾರ್ಯರಾದ ಮಂಗಳಾ ತಾಪಸ್ಕರ ಮಾತನಾಡಿ, ಕ್ರೀಡೆಯಿಂದ ಮಕ್ಕಳು ಶಾರೀರಿಕವಾಗಿ ಸದೃಢವಾದಗ ಮಾತ್ರ ಸದೃಢ ಮನಸ್ಸು ಹೊಂದಲು ಸಾಧ್ಯ. ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಸತತವಾಗಿ ಪಯತ್ನಿಸಿದಾಗ ಮಾತ್ರ ಗುರಿ ಮುಟ್ಟಲು ಸಾಧ್ಯ ಎಂದರು.

ಮಕ್ಕಳ ದೈಹಿಕ, ಮಾನಸಿಕ ಆರೋಗ್ಯಕ್ಕೆ ಕ್ರೀಡೆಗಳು ಸಹಕಾರಿಯಾಗಿವೆ. ಪ್ರತಿಯೊಂದು ಮಗುವೂ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಸಮಗ್ರ ಅಭಿವೃದ್ಧಿ ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಸರಕಾರ ವಿದ್ಯಾರ್ಥಿಗಳ ಬೆಳವಣಿಗೆ ಮತ್ತು ಆರೋಗ್ಯದ ಬಗ್ಗೆ ಚಿಂತನೆ ಮಾಡಿ ಪೌಷ್ಠಿಕಾಂಶಯುಕ್ತವಾದ ಆಹಾರವಾಗಿ ಬಿಸಿ ಊಟ, ಹಾಲು, ಮೊಟ್ಟೆ, ಶೇಂಗಾ ಚಿಕ್ಕಿ, ಬಾಳೆಹಣ್ಣು ಇದರ ಜೊತೆಗೆ ಆರೋಗ್ಯ ತಪಾಸಣೆ ಮಾಡಿ, ಉಚಿತವಾಗಿ ಮಾತ್ರೆಗಳನ್ನು ನೀಡುವ ಮೂಲಕ ಸದೃಢ ಯುವ ಜನತೆಯನ್ನು ಹೊಂದಬೇಕೆಂಬುದು ಸರಕಾರದ ಚಿಂತನೆಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕ್ರೀಡಾ ಧ್ವಜಾರೋಹಣ ನೆರವೇರಿಸಿದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ ಮಾತನಾಡಿ, ಸೋಲು-ಗೆಲವು ಮುಖ್ಯವಲ್ಲ. ಕ್ರೀಡೆಯಲ್ಲಿ ಭಾಗವಹಿಸುವದು ಮುಖ್ಯ. ಅಂದಾಗ ಮಾತ್ರ ಆರೋಗ್ಯದ ಜೊತೆಗೆ ಸದೃಢವಾಗಲು ಸಾಧ್ಯ ಎಂದರು.

ಅತಿಥಿಗಳಾಗಿ ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ, ಶಂಕರ ಹಡಗಲಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಬಿ. ಶೆಟ್ಟೆಪ್ಪನವರ, ಪ್ರವಾಸೋದ್ಯಮ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಎಸ್.ಪಿ. ಪ್ರಭಯ್ಯನಮಠ, ರಾಷ್ಟ್ರಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕರಾದ ಎಸ್.ಎನ್. ಬಳ್ಳಾರಿ, ಶರಣಪ್ಪ ನಾಗರಹಳ್ಳಿ, ಎಸ್. ಕೆ. ಮಂಗಳಗುಡ್ಡ, ಎಸ್.ಬಿ. ಮುಳಗುಂದ, ರವಿ ಕೋಟಿ, ಎಲ್.ಕೆ. ಚೌಕಿಮಠ, ಎಸ್.ಎಂ. ಮಾಶ್ಯಾಳ ಮುಂತಾದವರು ಉಪಸ್ಥಿತರಿದ್ದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಶೆಟ್ಟೆಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಸ್.ಬಿ. ಮುಳಗುಂದ ಸ್ವಾಗತಿಸಿದರು. ಎಂ.ಎಸ್. ಕುಚಬಾಳ ನಿರೂಪಣೆ ಮಾಡಿದರು. ಶಹರ ವಲಯದ ದೈಹಿಕ ಶಿಕ್ಷಣಾಧಿಕಾರಿ ಜೆ.ಬಿ. ಅಣ್ಣಿಗೇರಿ ವಂದಿಸಿದರು. ಕ್ರೀಡಾಕೂಟದಲ್ಲಿ ಒಟ್ಟೂ 3650 ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸರಕಾರ ತನ್ನ ನಿರ್ಧಾರವನ್ನು ಮರು ಪರಿಶೀಲಿಸಲಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ರನ್ನು ಆಹ್ವಾನಿಸುವ ನಿರ್ಧಾರವನ್ನು ತಕ್ಷಣ ಹಿಂತೆಗೆದುಕೊಳ್ಳುವಂತೆ ಆಗ್ರಹಿಸಿ ಹಿಂದೂ ಜನ ಜಾಗೃತಿ ಸಮಿತಿ ವತಿಯಿಂದ ಪಟ್ಟಣದಲ್ಲಿ ಸೋಮವಾರ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಮುಖಂಡರು ಮಾತನಾಡಿ, ಮೈಸೂರು ದಸರಾ ಕೇವಲ ಸಾಂಸ್ಕೃತಿಕ ಹಬ್ಬವಲ್ಲ. ಅದು ಕರ್ನಾಟಕದ ಅತಿ ದೊಡ್ಡ ಧಾರ್ಮಿಕ ಹಾಗೂ ಪಾರಂಪರಿಕ ಹಿಂದೂಗಳ ಹಬ್ಬವಾಗಿದೆ. ಇಂತಹ ಪವಿತ್ರ ಹಬ್ಬದ ಉದ್ಘಾಟನೆ ಮಾಡುವ ಅತಿಥಿಗಳು ದೇವಿಯ ಮೇಲೆ ಶ್ರದ್ಧೆ, ಮೂರ್ತಿ ಪೂಜೆಯ ಮೇಲೆ ಭಕ್ತಿ ಹಾಗೂ ನಾಡದೇವಿಯ ಮೇಲೆ ಗೌರವ ಹೊಂದಿರಬೇಕು. ಆದರೆ ಬಾನು ಮುಸ್ತಾಕ್ ಅವರು ಹಿಂದಿನ ಭಾಷಣಗಳಲ್ಲಿ ನಾಡದೇವಿ ಭುವನೇಶ್ವರಿ ದೇವಿಯನ್ನು ನಂಬುವುದಿಲ್ಲವೆಂದು ಸ್ಪಷ್ಟವಾಗಿ ಹೇಳಿದ್ದು, ದತ್ತಪೀಠ ಹೋರಾಟದ ಸಂದರ್ಭದಲ್ಲೂ ಮುಸ್ಲಿಂ ಸಮುದಾಯದ ಪರವಾಗಿ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಇಂತಹ ವ್ಯಕ್ತಿಯನ್ನು ದಸರಾ ಉದ್ಘಾಟನೆಗೆ ಆಹ್ವಾನಿಸುವುದು ಅನುಚಿತವಾಗಿದ್ದು, ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುತ್ತದೆ ಎಂದರು.

ಸರಕಾರ ಬಾನು ಮುಷ್ತಾಕರನ್ನು ಆಹ್ವಾನಿಸುವ ನಿರ್ಧಾರವನ್ನು ತಕ್ಷಣ ಹಿಂತೆಗೆದುಕೊಳ್ಳುವಂತೆ ಹಾಗೂ ಈ ಪವಿತ್ರ ಹಬ್ಬದ ಉದ್ಘಾಟನೆಗೆ ಡಾ. ಎಸ್.ಎಲ್. ಭೈರಪ್ಪ ಅವರಂತಹ ಗಣ್ಯರನ್ನು ಆಹ್ವಾನಿಸಿ ಗೌರವಿಸುವಂತೆ ಆಗ್ರಹಿಸಲಾಗಿದೆ. ಹಿಂದೂ ಸಮುದಾಯದ ಭಾವನೆಗಳಿಗೆ ನ್ಯಾಯ ಸಿಗುವ ನಿಟ್ಟಿನಲ್ಲಿ ಸರಕಾರ ನಿರ್ಧಾರವನ್ನು ಮರುಪರಿಶೀಲಿಸಿ ಸೂಕ್ತ ವ್ಯಕ್ತಿಗಳನ್ನು ಆಯ್ಕೆ ಮಾಡಬೇಕೆಂದು ವಿನಂತಿಸಿದರು.

ಉಪತಹಸೀಲ್ದಾರ ಪ್ರಶಾಂತ ಕಿಮಾಯಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ವಕೀಲ ಎಂ.ಎನ್. ಬಾಡಗಿ, ಅಮರೇಶ ಗಾಂಜಿ, ಈರಣ್ಣ ಪೂಜಾರ, ದುಂಡಪ್ಪ ಸವಣೂರು, ಯಲ್ಲಪ್ಪಗೌಡ ಪಾಟೀಲ, ಶಂಕರ ಬ್ಯಾಡಗಿ, ಸುಮಾ ಕುಂಬಾರ, ಶೋಭಾ ಇಟಗಿ ಮತ್ತಿತರರು ಹಾಜರಿದ್ದರು.

### ರೈತರ ಹೊಲಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅಪರ ಜಿಲ್ಲಾಧಿಕಾರಿ ದುರಗೇಶ ಕೆ

# ವಸ್ತುಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರುತ್ತೇವೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಅಡರಕಟ್ಟಿ, ಗೊಜನೂರು,ಮಾಡಳ್ಳಿ,ಯತ್ತಿನಹಳ್ಳಿ ಹಾಗೂಯಳವತ್ತಿಗ್ರಾಮಗಳರೈತರ ಹೊಲಗಳಿಗೆ ಅಪರಜಿಲ್ಲಾಧಿಕಾರಿ ದುರಗೇಶಕೆಸೋಮವಾರಭೇಟಿ ನೀಡಿ ಹೆಸರು, ಮೆಣಸಿನಕಾಯಿ, ಶೇಂಗಾ,ಮೆಕ್ಕೆಜೋಳ ಬೆಳೆ ಹಾನಿ ಪರಿಶೀಲನೆ ಮಾಡಿದರು.

ರೈತರೊಂದಿಗೆ ಮಾಹಿತಿ ಪಡೆದ ಅಪರ ಜಿಲ್ಲಾಧಿಕಾರಿಗಳು, ರೈತರ ಜಮೀನಿನಲ್ಲಿ ನೀರು ನಿಂತ ಪ್ರದೇಶಗಳನ್ನು ವೀಕ್ಷಿಸಿದರು. ಮಳೆಯಿಂದ ಹಾಳಾದ ಬೆಳೆ, ಯಂತ್ರಗಳ ಸಹಾಯದಿಂದ ಬೆಳೆ ಕಟಾವು ಮಾಡುತ್ತಿರುವುದನ್ನು ವೀಕ್ಷಿಸಿ, ಒಕ್ಕಲಿಯಾದ ಹೆಸರು ಕಾಳಿನಗುಣಮಟ್ಟಪರಿಶೀಲಿಸಿದರು.

ಸತತಮಳೆಯಿಂದಮುಂಗಾರಿನ ಪ್ರಮುಖ ವಾಣಿಜ್ಯ ಬೆಳೆ ಹೆಸರು ಸೇರಿ ಬಹುತೇಕ ಬೆಳೆಗಳು ಹಾಳಾಗಿವೆ. ಹೆಸರು ಕಾಳು ಕಪ್ಪಾಗಿವೆ,ಜೊಳ್ಳುಕಾಳು,ಬೂಸ್ಟ್ ಬಂದಿದ್ದು,ಬೆಲೆಯೂಸಂಪೂರ್ಣ ಕುಸಿತವಾಗಿದ್ದು, ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ.ಹಿಂಗಾರಿಗೆ ಮತ್ತೆಭೂಮಿಹದಗೊಳಿಸಬೇಕು, ಬದುಕುಸಾಗಿಸುವುದುಹೇಗೆಂಬ ಚಿಂತೆಯಲ್ಲಿರೈತರಿದ್ದೇವೆ.ಆರ್ಥಿಕ ಮುಗ್ಗಟ್ಟಿನಿಂದಬೆಳೆವಿಮೆಯನ್ನೂ ಪಾವತಿಸಿಲ್ಲ.ಸಂಕಷ್ಟದಸುಳಿಯಲ್ಲಿ ಸಿಕ್ಕು ಒದ್ದಾಡುತ್ತಿರುವ ರೈತರಿಗೆ ಬೆಳೆವಿಮೆ, ಬೆಳೆಹಾನಿ ಪರಿಹಾರ ಕಲ್ಪಿಸಿ ಹಿತ ಕಾಪಾಡುವ ಕೆಲಸ ಮಾಡಿ ಎಂದು ರೈತರು ಮನವಿ ಮಾಡಿದರು.



ಅಪರ ಜಿಲ್ಲಾಧಿಕಾರಿ ದುರುಗೇಶ ಕೆ ರೈತರೊಂದಿಗೆ ಮಾತನಾಡಿ, ಇಲ್ಲಿನ ಪರಿಸ್ಥಿತಿಯನ್ನು ಅವಲೋಕಿಸಿದ್ದೇವೆ. ಅತಿಯಾದ ಮಳೆಯಿಂದ ಗದಗ ಜಿಲ್ಲೆಯಾದ್ಯಂತ ಮುಂಗಾರಿನ ಬೆಳೆಗಳು ಹಾನಿಗೀಡಾಗಿವೆ. ರೈತರು ನಷ್ಟಕ್ಕೊಳಗಾಗಿದ್ದಾರೆ. ಈ ಬಗ್ಗೆ ಕೃಷಿ, ಕಂದಾಯ, ತೋಟಗಾರಿಕೆ ಸೇರಿ ಇಲಾಖೆಯಿಂದ ಜಂಟಿ ಸಮೀಕ್ಷಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು. ವಸ್ತುಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರಲಾಗುವದು. ರೈತರಿಗೆ ಬೆಳೆಹಾನಿ ಪರಿಹಾರ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈವೇಳೆಗ್ರೇಡ್-2ತಹಸೀಲ್ದಾರ ಮಂಜುನಾಥಅಮಾಸಿ,ಕಂದಾಯ ಅಧಿಕಾರಿ ಎಂ.ಎ. ನದಾಫ್, ಕೃಷಿ ಅಧಿಕಾರಿಗಳಾದ ಚಂದ್ರಶೇಖರ ನರಸಮ್ಮನವರ,ಪಿ.ಕೆ.ಹೊನ್ನಪ್ಪನವರ, ಗ್ರಾಮ ಲೆಕ್ಕಾಧಿಕಾರಿಗಳಾದ ನಾಗರಾಜ ಚೋಳಮ್ಮನವರ, ಎನ್.ಎ. ಪಠಾಣ, ಗ್ರಾ.ಪಂ ಅಧ್ಯಕ್ಷಮಂಜುನಾಥಚಲುವಾದಿ, ಉಪಾಧ್ಯಕ್ಷಮಹಾಂತಗೌಡಪಾಟೀಲ, ಗಂಗಾಧರಕಳಿಂಗನವರ,ರೈತರಾದ ರಾಜಕುಮಾರಕಿತ್ತಲಿ,ಮಹಾಂತಪ್ಪ ಸೊರಟೂರ,ರಾಜಣ್ಣರಾಯಚೂರ, ಚಂದ್ರಗೌಡದೊಡ್ಡಗೌಡ್ರ,ಸೋಮನಗೌಡ್ರ ಭಾಗವಾಡ,ಬಸನಗೌಡದೊಡ್ಡಗೌಡ್ರ, ಗ್ರಾಮ ಸಹಾಯಕ ಪರಪ್ಪ ಸಂಶಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿನ ಮುಖಂಡರು, ರೈತರು ಸೇರಿ ತಮ್ಮ ಗ್ರಾಮದಲ್ಲಿ ಆಗಿರುವ ಮಳೆಯ ಪ್ರಮಾಣ, ಹಾನಿ ಇತ್ಯಾದಿಗಳನ್ನು ವಿವರಿಸಿದರು.

ಹಾನಿಗೊಳಗಾದಬಹುತೇಕ ಹಳ್ಳಿಗಳಿಗೆ ಭೇಟಿ ನೀಡಿದ ಅಪರ ಜಿಲ್ಲಾಧಿಕಾರಿಗಳುಮತ್ತುಅಧಿಕಾರಿಗಳ ತಂಡ ಪ್ರತಿ ಗ್ರಾಮದಲ್ಲಿ ಸುಮಾರು 10ಕ್ಕೂ ಅಧಿಕ ಜಮೀನುಗಳಿಗೆ ಹಾಗೂ ರೈತರು ಒಕ್ಕಲಿ ಮಾಡುವ ಸ್ಥಳಗಳಿಗೆಭೇಟಿನೀಡಿರೈತರೊಂದಿಗೆ ಚರ್ಚಿಸಿದರು. ಹೆಸರು ಕಾಳು ಹಾಳಾಗಿರುವದನ್ನುವೀಕ್ಷಿಸಿರೈತರ ನೋವಿಗೆ ಸ್ಪಂದಿಸಿದರು.

## ಎಲ್‌ಐಸಿ ವಿಮಾ ಸಪ್ತಾಹ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜೀವವಿಮಾ ನಿಗಮ ಗದಗ 1ನೇ ಶಾಖೆಯಲ್ಲಿ ಎಲ್‌ಐಸಿಯ 69ನೇ ವರ್ಷದ ಸ್ಥಾಪನಾ ದಿನದ ಅಂಗವಾಗಿ ವಿಮಾ ಸಪ್ತಾಹವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಖೆಯ ಉಪಶಾಖಾಧಿಕಾರಿ ವಿಕ್ರಮ್ ದೇಶಮುಖ, ಜಿ.ಎಚ್. ತಳವಾರ ಗೌರಿಪೂರ, ಪೂಜಾರ, ರೆಡ್ಡಿಗಾರ, ಸಾಧಿಕ್, ಅಭಿವೃದ್ಧಿ ಅಧಿಕಾರಿಗಳಾದ ಸಿ.ಎಸ್. ಚಂದ್ರಕಾಂತ, ಸಿದ್ಧಾರ್ಥ, ವಿಮಾ ಪ್ರತಿನಿಧಿಗಳಾದ ಡಿ.ಸಿ. ಜವಳಿ, ಯಲ್ಲಪ್ಪ ಎಚ್.ಬಾಬರಿ, ರಾಜು ಗಾಣಿಗೇರ, ಜಗದೀಶ ಗೌಡರ, ಎನ್.ವಿ. ಮಾಳಿ, ಕೆ.ಪಿ. ಅಳವುಂಡಿ, ಎಲ್.ಐ. ಪಿಡ್ಡನಗೌಡರ, ಡಿ.ಎಚ್. ಗೋಡಬಾಲಿ, ರಾಜು ಕಾರಡಗಿ, ಎಸ್.ಎಂ. ಬಳಿಗಾರ, ಲಮಾಣಿ, ಪ್ರಭು ರವದಿ, ಈರಣ್ಣ ದೋಟಿಕಲ್ಲ, ರಮೇಶ ಕಲಾಲ, ಮರಳುಸಿದ್ದಪ್ಪ ದೊಡ್ಡಮನಿ, ಜ್ಯೋತಿ ಹಾನಗಲ್, ರಾಜೇಶ್ವರಿ ಕಲಾಲ ಮುಂತಾದವರು ಪಾಲ್ಗೊಂಡಿದ್ದರು.

## ಸೆ.6ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 6 ರ ಶನಿವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ರೋಣ ತಾಲೂಕಿನ ಹೊಳೆ ಆಲೂರು ಗ್ರಾಮ ಪಂಚಾಯತ್ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಂದು ಸಾರ್ವಜನಿಕರಿಂದ ದೂರು/ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸುಡಾನ್‌ನಲ್ಲಿ ಭಾರೀ ಭೂಕುಸಿತ: ಒಂದು ಹಳ್ಳಿಯೇ ಸಂಪೂರ್ಣ ನಾಶ, 1000ಕ್ಕೂ ಹೆಚ್ಚು ಜನರು ಸಾವು

■ ವಿಜಯಸಾಕ್ಷಿ ಸುದ್ದಿ, ಸುಡಾನ್

ಸುಡಾನ್‌ನ ಪಶ್ಚಿಮ ಪ್ರದೇಶದ ಡಾರ್ಫರ್‌ನಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಒಂದು ಹಳ್ಳಿ ಸಂಪೂರ್ಣ ನಾಶವಾಗಿದ್ದು, ಸುಮಾರು 1,000 ಜನರು ಸಾವನ್ನಪ್ಪಿದ್ದಾರೆ ಎಂದು ಆ ಪ್ರದೇಶವನ್ನು ನಿಯಂತ್ರಿಸುವ ಬಂಡಾಯ ಗುಂಪು ಸೋಮವಾರ (ಸೆ.1) ತಡರಾತ್ರಿ ಮಾಹಿತಿ ನೀಡಿದೆ.

ಆಗಸ್ಟ್ ಅಂತ್ಯದಲ್ಲಿ ಕೆಲವು ದಿನಗಳ ಕಾಲ ಸುರಿದ ಭಾರೀ ಮಳೆಯ ನಂತರ ಸೆಂಟ್ರಲ್ ಡಾರ್ಫರ್‌ನ ಮರ್ರಾ ಪರ್ವತಗಳಲ್ಲಿರುವ ತಾರಾಸಿನ್ ಗ್ರಾಮದಲ್ಲಿ ಭಾನುವಾರ ಈ ದುರಂತ ಸಂಭವಿಸಿದೆ ಎಂದು ಸುಡಾನ್ ಲಿಬರೇಶನ್ ಮೂವ್‌ಮೆಂಟ್-ಆರ್ಮಿ ಹೇಳಿಕೆಯಲ್ಲಿ ತಿಳಿಸಿದೆ.

ಆರಂಭಿಕ ಮಾಹಿತಿಯ ಪ್ರಕಾರ, ಎಲ್ಲಾ ಹಳ್ಳಿ ನಿವಾಸಿಗಳು ಸಾವನ್ನಪ್ಪಿದ್ದಾರೆ,

## ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಪಂ. ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ (ಎ.ಪಿ.ಎಂ.ಸಿ ಯಾರ್ಡ್) ಗದಗ, ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶನ ಪ್ರತಿಷ್ಠಾಪನೆ ಮಾಡಲಾಗಿದೆ. 7ನೇ ದಿನವಾದ ಮಂಗಳವಾರ ಶ್ರೀ ಡಾ. ಪಂ. ಪುಟ್ಟರಾಜ ಗವಾಯಿಗಳ 15ನೇ ಪುಣ್ಯ ಸ್ಮರಣೆ ಅಂಗವಾಗಿ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಿತು.

ಅನ್ನ ಸಂತರ್ಪಣೆ ಕಾರ್ಯಕ್ರಮಕ್ಕೆ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಕಲ್ಲಯ್ಯಜ್ಜನವರು ಚಾಲನೆ ನೀಡಿ, ಅನ್ನ ದಾನವು ಎಲ್ಲಾ ದಾನಗಳಿಗಿಂತಲೂ ಶ್ರೇಷ್ಠ ದಾನವಾಗಿದೆ. ಶ್ರೀ ಡಾ. ಪಂ. ಪುಟ್ಟರಾಜ ಗುರುಗಳ ಪುಣ್ಯಸ್ಮರಣೆ ಅಂಗವಾಗಿ ಶ್ರೇಷ್ಠವಾದ ಕಾರ್ಯವಾಗಿದೆ. ಎಲ್ಲರೂ ಧರ್ಮದಿಂದ ನಡೆದರೆ ಬದುಕು ಬಂಗಾರವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷರು ಪದಾಧಿಕಾರಿಗಳು, ದಲಾಲ ವರ್ತಕರ ಸಂಘದ ಹಾಗೂ ಖರೀದಿದಾರರ ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

### ನಗರದ ಬಿಸಿಎಂ ಹಾಸ್ಟೆಲ್‌ಗಳಿಗೆ ಭೇಟಿ ನೀಡಿದ ಇಒ ಚಂದ್ರಶೇಖರ ಕಂದಕೂರು

# ಶ್ರದ್ಧೆಯಿಂದ ಕಲಿತು ಸರ್ಕಾರಿ ನೌಕರರಾಗಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರು ಸೋಮವಾರ ತಡರಾತ್ರಿ ನಗರದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಿಸಿಎಂ ಬಾಲಕರ ವಸತಿ ನಿಲಯಗಳಿಗೆ ಭೇಟಿ ನೀಡಿದರು.

ಸಹಾಯಕ ನಿರ್ದೇಶಕ (ಗ್ರಾ.ಉ) ಬಸವರಾಜ ಬಡಿಗೇರ ಅವರ ಜೊತೆಗೂಡಿ ವಸತಿ ನಿಲಯಗಳಿಗೆ ಭೇಟಿ ನೀಡಿದ ಇಒ ಅವರು, ವಸತಿ ನಿಲಯಗಳ ಸ್ವಚ್ಛತೆ, ಊಟದ ವ್ಯವಸ್ಥೆ, ವಸತಿ ನಿಲಯಗಳಲ್ಲಿ ಮೂಲಭೂತ ಅವಶ್ಯಕತೆಗಳ ಪೂರೈಕೆಗಳ ಬಗ್ಗೆ ವಸತಿ ನಿಲಯದ ವಿದ್ಯಾರ್ಥಿಗಳ ಜೊತೆ ಸಮಾಲೋಚನೆ ನಡೆಸಿ ಮಾಹಿತಿ ಪಡೆದರು.



ಬಿಸಿಎಂ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಕಲಿಕೆಯ ಅನುಕೂಲತೆಗೆ ರಾಜ್ಯ ಸರ್ಕಾರ ಸಕಲ ಸೌಕರ್ಯಗಳನ್ನು ಒದಗಿಸಿದೆ. ಸರ್ಕಾರದ ಈ ಅನುಕೂಲತೆಯನ್ನು ಸದುಪಯೋಗಪಡಿಸಿಕೊಂಡು ಮುಂದೆ ಬರುವ ವಿದ್ಯಾರ್ಥಿಗಳಿಗೂ ಒದಗಿಸಿಕೊಡುವ ಕೆಲಸವನ್ನು ವಸತಿ ನಿಲಯದ ವಿದ್ಯಾರ್ಥಿಗಳು ಮಾಡಬೇಕು. ವಿದ್ಯಾರ್ಥಿಗಳಾಗಿದ್ದ ವೇಳೆ ನಮಗೆಲ್ಲ ಇಂತಹ ಯಾವುದೇ ಸೌಲಭ್ಯಗಳಿರಲಿಲ್ಲ. ಇಂದು ನಿಮಗೆ ಸಕಲ ರೀತಿಯ ಸೌಲಭ್ಯಗಳಿರುವಾಗ ಓದಿನಲ್ಲಿ ಹಿಂದೆ ಬೀಳದೆ ವಸತಿ ನಿಲಯಗಳನ್ನು ಪ್ರಾರ್ಥನಾ ಕೇಂದ್ರಗಳೆಂದು ಭಾವಿಸಿ ಭಕ್ತಿಯಿಂದ ಓದಿನಲ್ಲಿ ತೊಡಗಿಕೊಂಡು ಸರ್ಕಾರದ ಉನ್ನತ ಹುದ್ದೆ ಪಡೆದುಕೊಳ್ಳಿ ಎಂದು ಕಂದಕೂರು ಅವರು ವಸತಿ ನಿಲಯದ ವಿದ್ಯಾರ್ಥಿಗಳಿಗೆ ಬುದ್ಧಿಮಾತು ಹೇಳಿದರು.

ಸ್ವತಃ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಅನುಭವವುಳ್ಳ ಇಒ ಅವರು, ಮೆಟ್ರಿಕ್ ಪೂರ್ವ ವಸತಿ ನಿಲಯದ ಮಕ್ಕಳಿಗೆ ಯಾವುದೇ ವಿಷಯ ಕಠಿಣವೆನಿಸಿದರೂ ದೂರವಾಣಿ ಕರೆ ಮಾಡಿದರೆ ಆ ವಿಷಯದ ಕುರಿತು ಪಾಠ ಮಾಡುವುದಾಗಿ ಪ್ರೇರೇಪಿಸಿದರು. ಪ್ರತಿಯೊಂದು ನಿಲಯದ ಕೊಠಡಿಗೆ ತೆರಳಿ ಕೊಠಡಿಯ ಸ್ವಚ್ಛತೆ, ಬೆಡ್ ಮತ್ತು ಕಾಟ್ ವ್ಯವಸ್ಥೆ ಪರಿಶೀಲಿಸಿದರು. ಇದೇ ವೇಳೆ ವಿದ್ಯಾರ್ಥಿಗಳು, ಹಾಸ್ಟೆಲ್‌ಗೆ ಬರುವ ರಸ್ತೆ ಹದಗೆಟ್ಟಿದ್ದು, ದುರಸ್ಥಿಗೊಳಿಸುವಂತೆ ಮನವಿ ಮಾಡಿದರು. ಅಲ್ಲದೆ ಸದ್ಯ ಹಾಸ್ಟೆಲ್‌ನ ಸ್ನಾನದ ಕೊಠಡಿಯಲ್ಲಿಯೇ ಬಟ್ಟೆ ತೊಳೆದುಕೊಳ್ಳುತ್ತಿದ್ದು, ಪ್ರತ್ಯೇಕವಾಗಿ ಬಟ್ಟೆ ತೊಳೆಯುವ ಕೊಠಡಿ ವ್ಯವಸ್ಥೆ ಮಾಡಿಕೊಡಿ ಎಂದು ಮನವಿ ಮಾಡಿಕೊಂಡರು.

ವಾರಕ್ಕೊಮ್ಮೆ ಚಿಕನ್ ಊಟ ಕೊಡುವಂತೆ ವಿದ್ಯಾರ್ಥಿಗಳು ಇಒ ಬಳಿ ಮನವಿ ಮಾಡಿಕೊಂಡರು. ಇದಕ್ಕೆ ಪ್ರತಿಕ್ರಿಯಿಸಿದ ಇಒ ಅವರು, ಸದ್ಯ ತಿಂಗಳಿಗೆ ಒಂದು ಸಲ ಮಾತ್ರ ಚಿಕನ್ ಊಟ ಕೊಡಲು ಅವಕಾಶವಿದೆ. ಮುಂದಿನ ದಿನಗಳಲ್ಲಿ ಸರ್ಕಾರ ಸೂಚಿಸಿದರೆ ಕೊಡುವುದಾಗಿ ತಿಳಿಸಿದರಲ್ಲದೆ, ಚಿಕನ್ ಊಟದ ಮೇಲಿರುವ ಪ್ರೀತಿಯನ್ನು ಓದಿನಲ್ಲೂ ತೋರಿಸಿ ಎಂದು ಚಟಾಕಿ ಸಿಡಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka